ಅಕ್ಷರ ವಿಜೇತ
ನಿಜ ನಿರ್ಭಯ ನಿಷ್ಪಕ್ಷ ಎಡಿಟರ್: ಅನಿಲ್‌ಕುಮಾರ್
CIRCULATED FROM TS, KA, AP & TN
తెలంగాణ, ఆంధ్రప్రదేశ్, తమిళనాడు, కర్ణాటక
தேசிய நாளிதழ்
தெலுங்கானா,ஆந்திரா,கர்நாடகா,தமிழ்நாடு
Monday 08 September 2025 RNI: TELTEL/2021/81079 website: www.Vijethadaily.com

# ಸೆಪ್ಟೆಂಬರ್ 22ರಿಂದ ಸಾಮಾಜಿಕ & ಶೈಕ್ಷಣಿಕ ಸಮೀಕ್ಷೆ! ಏನು ದಾಖಲೆ ಬೇಕು?

**ಅಕ್ಷರ್ ವಿಜೇತ ,ಬೆಂಗಳೂರು :**

ಕರ್ನಾಟಕ ಸರ್ಕಾರದ ಮಹತ್ವದ 'ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ 2025' ಆರಂಭಕ್ಕೆ ಅಧಿಕಾರಿಗಳು ಸಜ್ಜಾಗಿದ್ದಾರೆ. ರಾಜ್ಯದ ಎಲ್ಲಾ ಜನರ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗತಿಗಳನ್ನು ತಿಳಿದುಕೊಂಡು ರಾಜ್ಯದ ಭವಿಷ್ಯದ ನೀತಿ ನಿರೂಪಣೆಯ ಆಧಾರವಾಗುತ್ತದೆ. ಇದಕ್ಕೆ ನಾಗರಿಕರು ಜವಾಬ್ದಾರಿಯಿಂದ ಇದರಲ್ಲಿ ಪಾಲ್ಗೊಳ್ಳುವಂತೆ ಸರ್ಕಾರ ಕೋರಿದೆ. ಈಗಾಗಲೇ ಮನೆ ಮನೆಗೆ ಸ್ಟಿಕ್ಕರ್ ಅಂಟಿಸಲಾಗುತ್ತಿದೆ. ಸಮೀಕ್ಷೆಯಲ್ಲಿ ಪಾಲ್ಗೊಳ್ಳಲು ಯಾವೆಲ್ಲ ದಾಖಲೆಗಳು ಬೇಕು? ಇಲ್ಲಿದೆ ಮಾಹಿತಿ.ಸೆಪ್ಟೆಂಬರ್ 22 ರಿಂದ ಅಕ್ಟೋಬರ್ 7 ರವರೆಗೆ ರಾಜ್ಯದಾದ್ಯಂತ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ 2025 ಸಮೀಕ್ಷೆ ನಡೆಯಲಿದೆ. ಈ ಬಗ್ಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಧಿಕೃತ ಮಾಹಿತಿ ನೀಡಿದೆ. ಈಗಾಗಲೇ ಸರ್ಕಾರಿ ಅಧಿಕಾರಿಗಳು, ಸಿಬ್ಬಂದಿಯಿಂದ ಮನೆ ಮನೆಗೆ ಸ್ಟಿಕ್ಕರ್ ಅಂಟಿಸುತ್ತಿದ್ದಾರೆ. ಈ ಮೂಲಕ ಕೆಲವು ದಾಖಲೆ ರೆಡಿ ಇಟ್ಟುಕೊಳ್ಳುವಂತೆ ಸರ್ಕಾರ ತಿಳಿಸಿದೆ.

ಈ ದಾಖಲೆಗಳು ಇಟ್ಟುಕೊಂಡಿರಿ

ಈ ಸಮೀಕ್ಷೆಯ ಪ್ರಶ್ನಾವಳಿಯಲ್ಲಿ ಸುಮಾರು 60 ಪ್ರಶ್ನೆಗಳು, ಪಡಿತರ ಚೀಟಿ ಅಥವಾ ಆಧಾರ್ ಸಂಖ್ಯೆ ದೃಢೀಕರಣ ಪತ್ರವಾಗಿ ಆಧಾರವಾಗಿದೆ ಸಮೀಕ್ಷೆ ಕಾರ್ಯವನ್ನು ಹೊಂದಿದೆ.



ಈ ಸಂದರ್ಭದಲ್ಲಿ ಪಡಿತರ ಚೀಟಿ, ಆಧಾರ್ ಕಾರ್ಡ್/ಸಂಖ್ಯೆ, ಮತದಾರರ ಗುರುತಿನ ಚೀಟಿ, ವಿಕಲಚೇತನರಲ್ಲಿ UID ಕಾರ್ಡ್ ಅಥವಾ ಪ್ರಮಾಣ ಪತ್ರಗಳು ಸಿದ್ಧವಾಗಿಟ್ಟು ಕೊಳ್ಳಬೇಕಿದೆ.ಪ್ರತಿ ಕುಟುಂಬದ ಸದಸ್ಯರ ಆಧಾರ್ ಕಾರ್ಡ್‌ಗಳು ಮೊಬೈಲ್‌ಗೆ ಲಿಂಕ್ ಆಗಿರುವುದನ್ನು ಖಚಿತಪಡಿಸಿಕೊಳ್ಳುವುದು ಅತ್ಯಗತ್ಯ. ಸಮೀಕ್ಷೆ ವೇಳೆ ಇ-ಕೆವೈಸಿ (ಇ-ಕೆವೈಸಿ) ಪ್ರಕ್ರಿಯೆಗಾಗಿ ಒಟಿಪಿ ಸಂಖ್ಯೆ ಆ ಸದಸ್ಯರ ಆಧಾರ್ ನಂಬರ್‌ಗೆ ಜೋಡಣೆ ಆಗಿರುವ ಮೊಬೈಲ್ ನಂಬರ್‌ಗೆ ಬರುತ್ತದೆ. ಒಂದು ವೇಳೆ ಆ ಸದಸ್ಯರು ಮನೆಯಲ್ಲಿ ಇಲ್ಲದಿದ್ದರೆ ಕುಟುಂಬದ ಪರವಾಗಿ ಉತ್ತರ ನೀಡುತ್ತಿರುವ ಸದಸ್ಯರು ಫೋನ್ ಮೂಲಕ OTP ಸಂಖ್ಯೆ ಪಡೆದ ಮಾಹಿತಿ ನೀಡಬೇಕು.ಜಾಗೃತಿ ಅಭಿಯಾನದಲ್ಲಿ ಸಕ್ರಿಯವಾಗಿ ಭಾಗವಹಿಸಲು ಇಚ್ಛಿಸುವ ವಿದ್ಯಾರ್ಥಿಗಳು 63617-89579 ಈ ನಂಬರ್‌ಗೆ ವಾಟ್ಸಪ್ ಮುಖಾಂತರ ಹಾಯ್ ಎಂದು ಸಂದೇಶವನ್ನು ಕಳುಹಿಸಿ ನೋಂದಣಿ ಮಾಡಿಕೊಳ್ಳಬಹುದು.

6 ವರ್ಷ ಮೇಲ್ಪಟ್ಟ ಪ್ರತಿಯೊಬ್ಬ ಸದಸ್ಯನಿಗೂ ಆಧಾರ್ ಕಡ್ಡಾಯವಾಗಿದೆ.

ಆಧಾರ್ ಸಂಖ್ಯೆ ಇಲ್ಲದಿದ್ದರೆ ಹತ್ತಿರದ ಆಧಾರ್ ನೋಂದಣಿ ಕೇಂದ್ರದಲ್ಲಿ ವಿವರಗಳನ್ನು ನೋಂದಾಯಿಸಿ ನೋಂದಣಿ ಸಂಖ್ಯೆಯು ಸಮೀಕ್ಷೆಯಲ್ಲಿದೆ ಭಾಗವಹಿಸಬಹುದು. ಹಾಗೆ, ಮೊಬೈಲ್ ನಂಬರ್ ಆಧಾರ್‌ಗೆ ಲಿಂಕ್ ಆಗಿಲ್ಲದಿದ್ದರೆ ಅದನ್ನು ತಕ್ಷಣವೇ ಲಿಂಕ್ ಮಾಡಿಸಿಕೊಳ್ಳಬೇಕು.ಪ್ರಶ್ನಾವಳಿಯಲ್ಲಿ ವ್ಯಾಪಾರ, ಉದ್ಯೋಗ, ವಿದ್ಯಾರ್ಹತೆ, ಕೌಶಲ್ಯ ತರಬೇತಿ ಅಗತ್ಯತೆ, ಆದಾಯ, ಕುಟುಂಬ ಮತ್ತು ಚರಾಸ್ತಿ ವಿವರಗಳು, ಧರ್ಮ, ಜಾತಿ, ಉಪಜಾತಿ, ಕುಲಕಸುಬು ಮುಂತಾದ ಮಾಹಿತಿಗಳ ಬಗ್ಗೆ ಪ್ರಶ್ನೆಗಳು ಇರುತ್ತವೆ. ಪ್ರತಿ ಕುಟುಂಬಕ್ಕೆ ಹಾಗೂ ಈ ಮೇಲೆ ತಿಳಿಸಿದ ದಾಖಲೆಗಳೊಂದಿಗೆ ಸಿದ್ಧವಾಗಿದೆ. ಆದ್ದರಿಂದ, ಈ ಪೂರ್ವ ಸಿದ್ಧತೆಯ ಬಗ್ಗೆ ಅರಿವು ಮೂಡಿಸಲು ಪದವಿ ವಿದ್ಯಾರ್ಥಿಗಳ ಮೂಲಕ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಲು ಕೋರಿದೆ.ಈ ಸಮೀಕ್ಷೆ, ದಾಖಲಾತಿ, ನೋಂದಣಿ ಹಾಗೂ ಇತರ ಹೆಚ್ಚಿನ ಮಾಹಿತಿಗಾಗಿ ನೀವು ಆಯೋಗದ ಸಹಾಯವಾಣಿ ಸಂಖ್ಯೆ 8050770004 ಗೆ ಕರೆ ಮಾಡಬಹುದು. ಇಲ್ಲವೇ https://kscbc.karnataka.gov.in ಈ ಅಧಿಕೃತ ವೆಬ್‌ಸೈಟ್‌ಗೆ ಭೇಟಿ ನೀಡಬಹುದು.

## ಚಕ್ರವರ್ತಿ ಸೂಲಿಬೆಲೆ ತಂದೆ ದೇವಿದಾಸ್ ಸುಬ್ರಾಯ ಶೇಟ್ ನಿಧನ



ಯುವ ಬ್ರಿಗೇಡ್ ಸಂಸ್ಥಾಪಕ ಹಾಗೂ ವಾಗ್ಮಿ ಚಕ್ರವರ್ತಿ ಸೂಲಿಬೆಲೆ ಅವರ ತಂದೆ ದೇವಿದಾಸ್ ಸುಬ್ರಾಯ ಶೇಟ್ ಅವರು ಇಂದು ನಿಧನರಾಗಿದ್ದಾರೆ. ಸೂಲಿಬೆಲೆಯ ಸರ್ಕಾರಿ ಶಾಲೆಯಲ್ಲಿ ದೀರ್ಘಕಾಲ ಮುಖ್ಯೋಪಾಧ್ಯಾಯರಾಗಿ ಸೇವೆ ಸಲ್ಲಿಸಿದ್ದ ದೇವದಾಸ್ ಸುಬ್ರಾಯ ಶೇಟ್ ಅವರು ಶ್ವಾಸಕೋಶದ ಸಮಸ್ಯೆಯಿಂದ ಬಳಲುತ್ತಿದ್ದರು. ತಮ್ಮ ಜೀವನವನ್ನು ಶಿಕ್ಷಣ ಸೇವೆಗೆ ಮೀಸಲಿಟ್ಟಿದ್ದರು. ತಂದೆಯ ನಿಧನಕ್ಕೆ ಚಕ್ರವರ್ತಿ ಸೂಲಿಬೆಲೆ ಅವರು ಸೋಷಿಯಲ್ ಮೀಡಿಯಾದಲ್ಲಿ ಭಾವುಕ ಪೋಸ್ಟ್ ಹಂಚಿಕೊಂಡಿದ್ದಾರೆ.

## ಉತ್ತರ ಕರ್ನಾಟಕ ಮೂಲದ ಬಿಎಂಟಿಸಿ ನೌಕರನನ್ನು ಹೊಡೆದ ಬೆಂಗಳೂರಿನ ಜಿಗಣಿ ಪೊಲೀಸ್




ಬಿಎಂಟಿಸಿ & ಕೆಎಸ್‌ಆರ್‌ಟಿಸಿ ಬಸ್ ವಿಚಾರ ಪದೇ ಪದೇ ಚರ್ಚೆಗೆ ಬರುತ್ತಿದೆ, ಅದರಲ್ಲೂ ಕನ್ನಡ ನಾಡಿನ ಈ ಸಾರಿಗೆ ಸಂಸ್ಥೆಗಳು ಇಡೀ ಜಗತ್ತಿನಾದ್ಯಂತ ಕಳೆದ 50ಕ್ಕೂ ಹೆಚ್ಚು ವರ್ಷಗಳಿಂದ ಭಾರಿ ದೊಡ್ಡ ಮಟ್ಟದಲ್ಲಿ ಸದ್ದು ಮಾಡುತ್ತಿವೆ. ಬಿಎಂಟಿಸಿ & ಕೆಎಸ್‌ಆರ್‌ಟಿಸಿ ಬಸ್ ಬಗ್ಗೆ ಕನ್ನಡಿಗರಲ್ಲೂ ಹೆಮ್ಮೆ ಮೂಡಿದೆ. ಸಿದ್ದರಾಮಯ್ಯ ಅವರ ಸರ್ಕಾರ ಅಧಿಕಾರಕ್ಕೆ ಬಂದ ನಂತರ, ಬಿಎಂಟಿಸಿ & ಕೆಎಸ್‌ಆರ್‌ಟಿಸಿ ಬಸ್ ಸಂಚಾರ ವ್ಯವಸ್ಥೆಯಲ್ಲಿ ಕೂಡ ಸಾಕಷ್ಟು ಬದಲಾವಣೆಗಳು ಆಗಿವೆ. ಹೀಗೆ ಅಭಿವೃದ್ಧಿ ಪಥದಲ್ಲಿ ರಾಜ್ಯ ಸಾರಿಗೆ ಸಾಗಿರುವ ಸಮಯದಲ್ಲೇ ಪೊಲೀಸರ ದೌರ್ಜನ್ಯ?




## ದಸರಾ ಪ್ರಯುಕ್ತ ಮೈಸೂರು-ಬೆಂಗಳೂರು-ಬೆಳಗಾವಿ ನಡುವೆ ವಿಶೇಷ ರೈಲುಗಳ ಸಂಚಾರ, ವೇಳಾಪಟ್ಟಿ

ದಸರಾ ಹಬ್ಬ ಸಮೀಪಿಸುತ್ತಿದೆ. ಸಾಂಸ್ಕೃತಿಕ ನಗರಿ ಮೈಸೂರು ಮಾತ್ರವಲ್ಲದೇ ರಾಜ್ಯಾದ್ಯಂತ ಸಡಗರದಿಂದ ಆಚರಣೆ ಮಾಡಲಾಗುತ್ತದೆ. ಶಾಲೆ-ಕಾಲೇಜುಗಳು ರಜೆ ಇದ್ದು, ಜನ ಸಂಚಾರ ಹೆಚ್ಚಾಗಿರುತ್ತದೆ. ಈ ಹಬ್ಬದ ಪ್ರಯುಕ್ತ ನೈರುತ್ಯ ರೈಲ್ವೆ ವಲಯ (SWR) ಪ್ರಯಾಣಿಕರಿಗೆ ಅನುಕೂಲ ಒದಗಿಸುವ ನಿಟ್ಟಿನಲ್ಲಿ ಮೂರು ಜಿಲ್ಲೆಗಳ ಮಧ್ಯೆ ವಿಶೇಷ ರೈಲುಗಳು ಕಾರ್ಯಾಚರಣೆ ಮಾಡಲಿದೆ.ನೈರುತ್ಯ ರೈಲ್ವೆ ನೀಡಿರುವ ವೇಳಾಪಟ್ಟಿ ಪ್ರಕಾರ, **SMVT** ಬೆಂಗಳೂರು-ಬೆಳಗಾವಿ-**SMVT** ಬೆಂಗಳೂರು ಎಕ್ಸ್‌ಪ್ರೆಸ್ ವಿಶೇಷ ರೈಲು (ಸಂಖ್ಯೆ **06275**) ಕಾರ್ಯಾಚರಣೆ ಮಾಡಲಿದೆ. ಈ ರೈಲು ಅಕ್ಟೋಬರ್ **04** ರಂದು ಸಂಜೆ **7** ಗಂಟೆಗೆ **SMVT** ಬೆಂಗಳೂರಿನಿಂದ ಹೊರಟು ಮರುದಿನ ಬೆಳಗ್ಗೆ **08:25** ಕ್ಕೆ ಬೆಳಗಾವಿಗೆ ಆಗಮಿಸಲಿದೆ.ರೈಲು ಸಂಖ್ಯೆ **06276** ಬೆಳಗಾವಿ-ಬೆಂಗಳೂರು **SMVT** ವಿಶೇಷ ಎಕ್ಸ್‌ಪ್ರೆಸ್ ರೈಲು ದಿನಾಂಕ **05.10.2025** ರಂದು ಸಂಜೆ **5:30** ಕ್ಕೆ ಬೆಳಗಾವಿಯಿಂದ ಹೊರಟು ಮರುದಿನ ಬೆಳಗ್ಗೆ **5** ಗಂಟೆಗೆ **SMVT** ಬೆಂಗಳೂರು ನಿಲ್ದಾಣಕ್ಕೆ ಬಂದು ತಲುಪಲಿದೆ. ಈ ಎರಡು ಬದಿಯಲ್ಲಿ ತಲಾ ಒಂದೊಂದು ಟ್ರಿಪ್‌ಗಳ ಸೇವೆ ಪ್ರಯಾಣಿಕರಿಗೆ ಸಿಗಲಿದೆ.

## ಪೊಲೀಸ್ ಕಾನ್ಸ್‌ಟೇಬಲ್ ವಯೋಮಿತಿ ಹೆಚ್ಚಳಕ್ಕೆ ಆಗ್ರಹ!

ಕರ್ನಾಟಕದಲ್ಲಿ ಪೊಲೀಸ್ ಕಾನ್ಸ್‌ಟೇಬಲ್ ವಯೋಮಿತಿ ಹೆಚ್ಚಿಸಬೇಕುಎನ್ನುವಆಗ್ರಹಕೇಳಿ ಬಂದಿದೆ. ಇನ್ನು ಕರ್ನಾಟಕದಲ್ಲಿ ಪೊಲೀಸ್ ಕಾನ್ಸ್‌ಟೇಬಲ್ ವಯೋಮಿತಿ ಹೆಚ್ಚಳ ಮಾಡುವುದಕ್ಕೆಸಂಬಂಧಿಸಿದಂತೆ ಈ ಹಿಂದೆಯೇ ಸಿದ್ದರಾಮಯ್ಯ ಅವರುಭರವಸೆಕೊಟ್ಟಿದ್ದರುಆದರೆ ಅದನ್ನು ಜಾರಿಗೆ ತಂದಿಲ್ಲ ಎಂದ ಅಸಮಾಧಾನ ವ್ಯಕ್ತವಾಗಿದೆ.ಅಖಿಲ ಕರ್ನಾಟಕ ರಾಜ್ಯ ವಿದ್ಯಾರ್ಥಿ ಸಂಘಟನೆಯ ರಾಜ್ಯಾಧ್ಯಕ್ಷರುಹಾಗೂವಿದ್ಯಾರ್ಥಿ ಘಟಕದ ರಾಜ್ಯ ಪ್ರಧಾನ ಸಂಚಾಲಕರು ಕರ್ನಾಟಕ ರಕ್ಷಣಾ ವೇದಿಕೆ, ಸಮಾಜ ಸೇವಕರು ರಾಜಾಜಿನಗರ ಬೆಂಗಳೂರು ಕಾಂತಕುಮಾರ್‌ಆರ್‌ಅವರುಈ ಸಂಬಂಧ ಸೋಷಿಯಲ್ ಮೀಡಿಯಾ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ. ಐದು ವರ್ಷ ವಯೋಮಿತಿ ಹೆಚ್ಚಿಸದಿದ್ದರೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಮನೆಮುತ್ತಿಗೆಹಾಕುವಬಗ್ಗೆ ಅವರುಮಾತನಾಡಿದ್ದಾರೆ.ನಮಸ್ತೆ ಮಾನ್ಯ ಮುಖ್ಯ ಮಂತ್ರಿ ಸಿದ್ದರಾಮಯ್ಯ ಅವರೇ ನೀವು ಪೊಲೀಸ್ ಕಾನ್ಸ್‌ಟೇಬಲ್ ವಯೋಮಿತಿ ಹೆಚ್ಚಿಗೆ ಮಾಡುವುದಾಗಿ ಈ ಹಿಂದೆಯೇ ಹೇಳಿಕೆ ಕೊಟ್ಟಿದ್ದಿರಿ. ವಿರೋಧ ಪಕ್ಷದಲ್ಲಿಇದ್ದಾಗಕೂಡಹೇಳಿಕೆನೀಡಿ ಪೊಲೀಸ್ ಕಾನ್ಸ್‌ಟೇಬಲ್ ವಯೋಮಿತಿಸಾಮನ್ಯವರ್ಗ30 ವರ್ಷSC/ST/OBCಗೆ33ವರ್ಷ ಮಾಡುತ್ತೇನೆ ಎಂದು ಭರವಸೆ ಕೊಟ್ಟು ನೀವು ರಾಜ್ಯ ಸಿವಿಲ್ ಸೇವೆಗಳಿಗೆ2ವರ್ಷವಯೋಮಿತಿ ಸಡಿಲಿಕೆಮಾಡಿದ್ದೀರಾ.ಆದರೆಗೃಹ ಸಚಿವಜಿ.ಪರಮೇಶ್ವರ್‌ಪೊಲೀಸ್ ಇಲಾಖೆಯಲ್ಲಿ 5/6 ವರ್ಷದಿಂದ ಸರಿಯಾಗಿನೇಮಕಾತಿಆಗಿಲ್ಲನೀವು ಚಾಮುಂಡೇಶ್ವರಿನೆಲದಲ್ಲಿಟ್ವೀಟ್ ಕೂಡ ಮಾಡಿರುತ್ತೀರಿ. ಮತ್ತೆ ಸಾರ್ವಜನಿಕವಾಗಿಹೇಳಿಕೆಕೊಟ್ಟ ತಕ್ಷಣಎಷ್ಟುಅಭ್ಯರ್ಥಿಗಳುಖಾಸಗಿ ಕೆಲಸಬಿಟ್ಟುಓದುತ್ತಿದ್ದಾರೆ.



ಈ ವಯೋಮಿತಿಯನ್ನು ರಾಜ್ಯ ಪತ್ರದಲ್ಲಿ ಹೊರಡಿಸುವ ಮೂಲಕ ಬಡ ಮಕ್ಕಳ ಪರವಾಗಿ ನಿಲ್ಲಿಬೇಕು.

ಈ ವಯೋಮಿತಿಯನ್ನು ರಾಜ್ಯ ಪತ್ರದಲ್ಲಿ ಹೊರಡಿಸುವ ಮೂಲಕ ಬಡ ಮಕ್ಕಳ ಪರವಾಗಿ ನಿಲ್ಲಿಬೇಕು. ಅದೇ ರೀತಿ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಹುದ್ದೆಗೆ 5 ವರ್ಷದಿಂದ ನೇಮಕಾತಿ ಆಗಿಲ್ಲ ಅದು ಕೂಡ ಹೆಚ್ಚಿಗೆ ಮಾಡಿ ನೊಂದ ಬಡ ವಿದ್ಯಾರ್ಥಿಗಳ ಪರವಾಗಿ ನಿಂತು. ಸಾಮಾಜಿಕ ನ್ಯಾಯ ಕೊಡಿ ನೀವು ಅಧಿಕಾರಿಗಳ ಮಾತು ಕೇಳಿ ವಿದ್ಯಾರ್ಥಿಗಳಿಗೆ ಮೋಸ ಮಾಡಿದರೆ, ಇನ್ನು ರಾಜ್ಯದಲ್ಲಿ ಕಾಂಗ್ರೆಸ್‌ಗೆ ಸಂಕಷ್ಟವಾಗಲಿದೆ. ದಯವಿಟ್ಟು ಆದಷ್ಟು ಬೇಗ ಈ ಗೊಂದಲಕ್ಕೆ ಒಂದು ತೆರೆ ಎಳೆದು ವಿದ್ಯಾರ್ಥಿಗಳ ಕಣ್ಣೀರು ಒರೆಸಿ, ಕರ್ನಾಟಕದ ಮುಖ್ಯಮಂತ್ರಿ ಅವರೇ ಸಾಮಜಿಕ ಹರಿಕಾರ ದಿನ ದಲಿತರ ಬಂಧು ಅಂತ ಸ್ವೀಕಾರ ಮಾಡಿದ್ದಾರೆ ನಿಮ್ಮನ್ನು ವಿದ್ಯಾರ್ಥಿಗಳು ಮೋಸ ಮಾಡಬೇಡಿ ಎಂದು ಲಕ್ಷಾಂತರ ಅಭ್ಯರ್ಥಿಗಳ ಬೇಡಿಕೆ ಈಡೇರಸಿ ಎಂದು ಮನವಿ ಮಾಡಿದ್ದಾರೆ.

# ಉತ್ತರ ಕರ್ನಾಟಕ ಮೂಲದ ಬಿಎಂಟಿಸಿ ನೌಕರನನ್ನು ಹೊಡೆದ ಬೆಂಗಳೂರಿನ ಜಿಗಣಿ ಪೊಲೀಸ್

ಅಕ್ಷರ್ ವಿಜೇತ ,ಬೆಂಗಳೂರು :

ಹೌದು, ಬಿಎಂಟಿಸಿ & ಕೆಎಸ್ಆರ್‌ಟಿಸಿ ಬಸ್ ಸಂಚಾರದ ವಿಚಾರದಲ್ಲಿ ಪದೇ ಪದೇ ಸುದ್ದಿ ಓಡಾಡ್ತಾ ಇರ್ತವೆ. ಒಂದು ಕಡೆ ಕಡಿಮೆ ಬಸ್ ಓಡಾಟ ಸೇರಿದಂತೆ, ಇನ್ನೊಂದು ಕಡೆ ಅನಗತ್ಯ ಬಸ್‌ಗಳ ಓಡಾಟ ಕೂಡ ಸದ್ದು ಮಾಡುತ್ತಲೇ ಇರುತ್ತದೆ. ಹೀಗೆ ಬಿಎಂಟಿಸಿ & ಕೆಎಸ್ಆರ್‌ಟಿಸಿ ಕುರಿತು ಭಾರಿ ದೊಡ್ಡ ಚರ್ಚೆಗಳು ಸೋಷಿಯಲ್ ಮೀಡಿಯಾಗಳಲ್ಲಿ ನಡೆಯುತ್ತಲೇ ಇರುತ್ತವೆ. ಹೀಗಿದ್ದಾಗಲೇ, ಉತ್ತರ ಕರ್ನಾಟಕ ಮೂಲದ ಬಿಎಂಟಿಸಿ ನೌಕರನನ್ನು ಹೊಡೆದ ಬೆಂಗಳೂರಿನ ಜಿಗಣಿ ಪೊಲೀಸ್!

ಉತ್ತರ ಕರ್ನಾಟಕ ಮೂಲದವರ ಮೇಲೆ ಹಲ್ಲೆ?

ಹೌದು, ಇದೀಗ ಸೋಷಿಯಲ್ ಮೀಡಿಯಾದಲ್ಲಿ ವಿಡಿಯೋ ಒಂದು ವೈರಲ್ ಆಗುತ್ತಾ ಇದೆ. ಈ ವಿಡಿಯೋದಲ್ಲಿ ಜಿಗಣಿ ಪೊಲೀಸ್ ಸಿಬ್ಬಂದಿ ಒಬ್ಬರು ಉತ್ತರ ಕರ್ನಾಟಕ ಮೂಲದ ಬಿಎಂಟಿಸಿ ಬಸ್ ಸಿಬ್ಬಂದಿ ಮೇಲೆ ಹಲ್ಲೆ ನಡೆಸಿರುವ ಆರೋಪ ಕೇಳಿ ಬಂದಿದೆ. ತನ್ನ ಕಾರಿಗೆ ಸೈಡ್ ಬಿಡಲಿಲ್ಲ ಅಂತಾ ಬಸ್ ಚಾಲಕನ ಮೇಲೆ ಜಿಗಣಿ ಠಾಣೆ ಪೊಲೀಸ್ ಸಿಬ್ಬಂದಿ ಹಲ್ಲೆ ಮಾಡಿ, ಅಮ್ಮ & ಅಕ್ಕನ ಬಗ್ಗೆಯು ಅವಾಚ್ಯವಾಗಿ ಬೈದಿರುವ ಆರೋಪ ಕೇಳಿ ಬಂದಿದೆ ಪೊಲೀಸ್ ಸಿಬ್ಬಂದಿ ವಿರುದ್ಧ ಕೇಳಿ ಬಂದಿದೆ.

ಪೊಲೀಸ್ ದರ್ಪದ ವಿರುದ್ಧ ಪ್ರತಿಭಟನೆ

ರಾತ್ರಿ 11 ಗಂಟೆ ಸುಮಾರಿಗೆ ಈ ಘಟನೆ ನಡೆದಿದೆ ಎಂದು ಆರೋಪ ಮಾಡಲಾಗಿದ್ದು, ಮದ್ಯಪಾನ ಮಾಡಿದ್ದ ಪೊಲೀಸ್ ಸಿಬ್ಬಂದಿ ಹೀಗೆ ದಿಢೀರ್ ಬಸ್ ಡಿಪೋ ಒಳಗೆ ಕಾರು ನುಗ್ಗಿಸಿ ಬಸ್ ಚಾಲಕನ ಮೇಲೆ ಹಲ್ಲೆ ನಡೆಸಲು ಮುಂದಾಗಿದ್ದ ಆರೋಪ ಮಾಡಲಾಗಿದೆ. ಇನ್ನು ಮತ್ತೊಂದು ಕಡೆಯಲ್ಲಿ ಬಸ್ ಚಾಲಕ ಸುನೀಲ್ ಮೇಲೆ ಹಲ್ಲೆ ಮಾಡಿ ಪೊಲೀಸರು ದರ್ಪ ತೋರಿದ್ದಾರೆ, ಈ ಹಲ್ಲೆ ಖಂಡಿಸಿ ಡಿಪೋದಿಂದ ಬಸ್ ಹೊರಗಡೆ ತೆಗೆಯಲ್ಲ ಎಂದು ಬಿಎಂಟಿಸಿ ಸಿಬ್ಬಂದಿ ಪ್ರತಿಭಟಿಸಿದ್ದಾರೆ. ಕೊನೆಗೆ ದೊಡ್ಡ ಅಲ್ಲೋಲ ಕಲ್ಲೋಲವೇ ಉಂಟಾಗಿತ್ತು....

# ಪೊಲೀಸ್ ಕಾನ್ಸ್‌ಟೇಬಲ್ ವಯೋಮಿತಿ ಹೆಚ್ಚಳಕ್ಕೆ ಆಗ್ರಹ!

ಅಕ್ಷರ್ ವಿಜೇತ ,ಬೆಂಗಳೂರು :



ಹೆಚ್ಚು ಸಂಚಾರ ದಟ್ಟಣೆ ಕಂಡು ಬರುವ ಬೆಂಗಳೂರಿನಲ್ಲಿ ರಸ್ತೆ ಅಪಘಾತಗಳು ಸಂಭವಿಸುವುದು ಮಾಮೂಲು. ಆದರೆ ಇಲ್ಲೊಂದು ಬಾಲಕ ಕಾರಿನ ಸನ್‌ರೂಫ್‌ನಿಂದ ತಲೆ ಹೊರ ಹಾಕಿ ನಿಂತುಕೊಂಡು ಖುಷಿಪಡುತ್ತಿದ್ದ. ಈ ವೇಳೆ ನಡೆದ ಭೀಕರ ಘಟನೆ, ರಸ್ತೆ ಸುರಕ್ಷತೆ, ಜೀವ ರಕ್ಷಣೆ ಕಾಳಜಿ ಬಗ್ಗೆ ಮತ್ತೊಮ್ಮೆ ಸಾಮಾಜಿಕ ಜಾಲತಾಣದಲ್ಲಿ ಚರ್ಚೆ ಹುಟ್ಟು ಹಾಕಿದೆ. ಘಟನೆಗೆ ಸಂಬಂಧಿಸಿದಂತಹ ವಿಡಿಯೋ ಆನ್‌ಲೈನ್‌ನಲ್ಲಿ ವೈರಲ್ ಆಗುತ್ತಿದೆ.ಮಕ್ಕಳಿರುವ ಮನೆಗಳಲ್ಲಿ ಕಾರಿನ ಸನ್‌ರೂಫ್ ನಿಂದಾಗುವ ಯಡವಟ್ಟು, ಅದನ್ನು ಬಳಸಿಕೊಳ್ಳುವಾಗ ಇರಬೇಕಾದ ನಿಯಮಗಳ ಮೇಲೆ ಈ ವಿಡಿಯೋ ಜಾಗೃತಿ ಮೂಡಿಸುತ್ತದೆ. ಅಷ್ಟು ಮಾತ್ರವಲ್ಲದೇ ಅಪಘಾತ, ಜೀವಕ್ಕೆ ಅಪಾಯಗಳ ಎದುರಾಗಬಹುದಾದ ಗಂಭೀರ ಕಳವಳವನ್ನು ಇದು ಹುಟ್ಟುಹಾಕಿದೆ. ಅಷ್ಟಕ್ಕೂ ವಿಡಿಯೋದಲ್ಲಿ ಏನಿದೆ?ಬಾಲಕ ಚಲಿಸುತ್ತಿರುವ ಕಾರಿನ ಸನ್‌ರೂಫ್‌ನಿಂದ ತಲೆ ಹೊರ ಹಾಕಿ ನಿಂತಿದ್ದಾನೆ. ಕೆಂಪು ಕಾರು ಚಲಿಸುತ್ತಿದೆ. ಈ ವೇಳೆ ದೊಡ್ಡ ಮತ್ತು ಎತ್ತರದ ಲಾರಿಗಳು ಬರದಂತೆ ರಸ್ತೆಗೆ ನಿರ್ದಿಷ್ಟ ಎತ್ತರದಲ್ಲಿ ಹಾಕಿರುವ ಕಬ್ಬಿಣ ತಡೆಗೋಡೆಗೆ ಡಿಕ್ಕಿ ಕಾರಿನ ಸನ್‌ರೂಫ್‌ನಿಂದ ಆಚೆ ನಿಂತಿದ್ದ ಹುಡುಗನ ತಲೆ ಡಿಕ್ಕಿ ಹೊಡೆದಿದೆ. ಬಾಲಕನ ತಲೆಗೆ ಗಾಯಗಳು ಆಗಿವೆ ಎಂದು ವರದಿ ಆಗಿದೆ. ತಡೆಗೋಡಿಗೆ ಡಿಕ್ಕಿ ಹೊಡೆಯುತ್ತಿದ್ದಂತೆ ವಾಹನದ ಒಳಕ್ಕೆ ಬಾಲಕ ಕುಸಿದು ಬಿದ್ದ ಘಟನೆಯನ್ನು ವಿಡಿಯೋ ನೋಡಬಹುದು. ಬಾಲಕನ ಖುಷಿಯ ಕ್ಷಣ ಒಂದೇ ಕ್ಷಣಕ್ಕೆ ಬದಲಾಗಿ ಬಿಟ್ಟಿದೆ. ಇದು ಒಂದು ಕ್ಷಣ ಎಂತವರನ್ನು ಭಯಭೀತರನ್ನಾಗಿ ಮಾಡುತ್ತದೆ.ಮನರಂಜನೆಗೆ, ಖುಷಿ ಕ್ಷಣ ಅನುಭವಿಸುವ ಮುಂದಾಗಿದ್ದ ಬಾಲಕನಿಗೆ ಆಘಾತ ಎದುರಾಗಿದೆ. ನೋಡಲು ತಮಾಷೆ ರೀತಿ ಕಂಡರು ಸಹ ಕಾರಿನ ಕಿಟಿಕಿಯಿಂದ, ಕೈ ತಲೆ ಹೊರ ಹಾಕುವವರಿಗೂ ಇದು ಎಚ್ಚರಿಕೆಯಂತಿದೆ. ಜೀವಕ್ಕೆ ಅಪಾಯ ಎದುರಾಗಬಹುದು. ಆದ್ದರಿಂದ ರಸ್ತೆ ಸುರಕ್ಷತಾ ನಿಯಮ ಪಾಲಿಸಬೇಕಾಗುತ್ತದೆ. ಪೋಷಕರ ಜವಾಬ್ದಾರಿ ಏನೆಂಬುದನ್ನು ಈ ಘಟನೆ ತಿಳಿಸುತ್ತದೆ.

## ಮನರಂಜನೆಗೆ, ಖುಷಿ ಕ್ಷಣ ಅನುಭವಿಸುವ ಮುಂದಾಗಿದ್ದ ಬಾಲಕನಿಗೆ ಆಘಾತ ಎದುರಾಗಿದೆ.

ಬಾಲಕ ಚಲಿಸುತ್ತಿರುವ ಕಾರಿನ ಸನ್‌ರೂಫ್‌ನಿಂದ ತಲೆ ಹೊರ ಹಾಕಿ ನಿಂತಿದ್ದಾನೆ. ಕೆಂಪು ಕಾರು ಚಲಿಸುತ್ತಿದೆ. ಈ ವೇಳೆ ದೊಡ್ಡ ಮತ್ತು ಎತ್ತರದ ಲಾರಿಗಳು ಬರದಂತೆ ರಸ್ತೆಗೆ ನಿರ್ದಿಷ್ಟ ಎತ್ತರದಲ್ಲಿ ಹಾಕಿರುವ ಕಬ್ಬಿಣ ತಡೆಗೋಡೆಗೆ ಡಿಕ್ಕಿ ಕಾರಿನ ಸನ್‌ರೂಫ್‌ನಿಂದ ಆಚೆ ನಿಂತಿದ್ದ ಹುಡುಗನ ತಲೆ ಡಿಕ್ಕಿ ಹೊಡೆದಿದೆ. ಬಾಲಕನ ತಲೆಗೆ ಗಾಯಗಳು ಆಗಿವೆ ಎಂದು ವರದಿ ಆಗಿದೆ. ತಡೆಗೋಡಿಗೆ ಡಿಕ್ಕಿ ಹೊಡೆಯುತ್ತಿದ್ದಂತೆ ವಾಹನದ ಒಳಕ್ಕೆ ಬಾಲಕ ಕುಸಿದು ಬಿದ್ದ ಘಟನೆಯನ್ನು ವಿಡಿಯೋ ನೋಡಬಹುದು. ಬಾಲಕನ ಖುಷಿಯ ಕ್ಷಣ ಒಂದೇ ಕ್ಷಣಕ್ಕೆ ಬದಲಾಗಿ ಬಿಟ್ಟಿದೆ. ಇದು ಒಂದು ಕ್ಷಣ ಎಂತವರನ್ನು ಭಯಭೀತರನ್ನಾಗಿ ಮಾಡುತ್ತದೆ.

ಮನರಂಜನೆಗೆ, ಖುಷಿ ಕ್ಷಣ ಅನುಭವಿಸುವ ಮುಂದಾಗಿದ್ದ ಬಾಲಕನಿಗೆ ಆಘಾತ ಎದುರಾಗಿದೆ. ನೋಡಲು ತಮಾಷೆ ರೀತಿ ಕಂಡರು ಸಹ ಕಾರಿನ ಕಿಟಿಕಿಯಿಂದ, ಕೈ ತಲೆ ಹೊರ ಹಾಕುವವರಿಗೂ ಇದು ಎಚ್ಚರಿಕೆಯಂತಿದೆ. ಜೀವಕ್ಕೆ ಅಪಾಯ ಎದುರಾಗಬಹುದು. ಆದ್ದರಿಂದ ರಸ್ತೆ ಸುರಕ್ಷತಾ ನಿಯಮ ಪಾಲಿಸಬೇಕಾಗುತ್ತದೆ. ಪೋಷಕರ ಜವಾಬ್ದಾರಿ ಏನೆಂಬುದನ್ನು ಈ ಘಟನೆ ತಿಳಿಸುತ್ತದೆ.

# ಚಕ್ರವರ್ತಿ ಸೂಲಿಬೆಲೆ ತಂದೆ ದೇವಿದಾಸ್ ಸುಬ್ರಾಯ ಶೇಟ್ ನಿಧನ

ಬದುಕಿನ ಪಯಣದಲ್ಲಿ ಶಾಶ್ವತವಾಗಿ ಯಾರೂ ಜೊತೆಗಿರಲಾರರು. ಆದರೆ ಕೆಲವರ ವಿಯೋಗ ಅನಿರೀಕ್ಷಿತ ಮತ್ತು ದುಃಖಮಯ ಎಂದು ಚಕ್ರವರ್ತಿ ಬರೆದುಕೊಂಡಿದ್ದಾರೆ. ಅಪ್ಪ ಇಂದು ಬೆಳಿಗ್ಗೆಯಷ್ಟೇ ಯಾತ್ರೆ ಮುಗಿಸಿ ಅಗಲಿದರು. ಕೆಲದಿನಗಳ ಶ್ವಾಸಕೋಶದ ಸಮಸ್ಯೆ ಅವರನ್ನು ಈ ಹಂತಕ್ಕೆ ಒಯ್ಯುವುದೆಂದು ನಾನು ಭಾವಿಸಿರಲಿಲ್ಲ. ಅವರನ್ನು ಪ್ರೀತಿಸುವವರು ಬಹಳ ಮಂದಿ. ಎಲ್ಲರಿಗೂ ವಿಷಯ ಮುಟ್ಟಿಸುವುದು ಹೇಗೆ? ಅದಕ್ಕೇ ಇಲ್ಲಿ ಹಂಚಿಕೊಳ್ಳುತ್ತಿರುವೆ. ಅವರ ಸದ್ಗತಿಗೆ ಪ್ರಾರ್ಥಿಸಿಕೊಳ್ಳಿ" ಎಂದು ಚಕ್ರವರ್ತಿ ಸೂಲಿಬೆಲೆ ಸಾವಿನ ವಿಚಾರವನ್ನು ಖಚಿತಪಡಿಸಿದ್ದಾರೆ.ದೇವಿದಾಸ್ ಸುಬ್ರಾಯ ಶೇಟ್ ಅವರ ನಿಧನಕ್ಕೆ ಬಿಜೆಪಿ ನಾಯಕರು ಸಂತಾಪ ಸೂಚಿಸಿದ್ದಾರೆ. ನಾಡಿನ ಖ್ಯಾತ ವಾಗ್ಮಿಗಳಾದ ಚಕ್ರವರ್ತಿ ಸೂಲಿಬೆಲೆ ಅವರ ತಂದೆಯವರ ನಿಧನದ ಸುದ್ದಿ ಕೇಳಿ ದುಃಖವಾಗಿದೆ. ಶ್ರೀಯುತರ ಆತ್ಮಕ್ಕೆ ಶಾಂತಿ, ಸದ್ಗತಿ ಕೋರಿ, ಕುಟುಂಬದ ಸದಸ್ಯರಿಗೆ ನೋವನ್ನು ಸಹಿಸುವ ಶಕ್ತಿ ನೀಡಲೆಂದು ಭಗವಂತನಲ್ಲಿ ಪ್ರಾರ್ಥಿಸುತ್ತೇನೆ ಎಂದು ಸಂಸದ ತೇಜಸ್ವಿ ಸೂರ್ಯ ಕಂಬನಿ ಮಿಡಿದಿದ್ದಾರೆ.ಚಕ್ರವರ್ತಿ ಸೂಲಿಬೆಲೆ ಅವರ ಪೂಜ್ಯ ತಂದೆಯವರಾದ ದೇವಿದಾಸ್ ಸುಬ್ರಾಯ ಶೇಟ್ ಅವರು ನಿಧನರಾದ ಸುದ್ದಿ ತಿಳಿದು ದುಃಖವಾಯಿತು. ಮೃತರ ಆತ್ಮಕ್ಕೆ ಶಾಂತಿ ಸಿಗಲೆಂದು ಹಾಗೂ ಕುಟುಂಬದ ಸದಸ್ಯರಿಗೆ ದುಃಖವನ್ನು ಭರಿಸುವ ಶಕ್ತಿಯನ್ನು ನೀಡಲೆಂದು ಭಗವಂತನಲ್ಲಿ ಪ್ರಾರ್ಥಿಸುತ್ತೇನೆ, ಓಂ ಶಾಂತಿ ಎಂದು ಪ್ರತಾಪ್ ಸಿಂಹ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ.

ಪ್ರಖರ ವಾಗ್ಮಿ ಚಕ್ರವರ್ತಿ ಸೂಲಿಬೆಲೆ ಅವರ ತಂದೆಯವರು ಇಹಲೋಕ ತ್ಯಜಿಸಿದರು ಎಂಬ ವಿಷಯ ತಿಳಿದು ಅತ್ಯಂತ ದುಃಖವಾಯಿತು. ಅವರ ಆತ್ಮಕ್ಕೆ ಶಾಂತಿ ಸಿಗಲಿ ಹಾಗೂ ಅವರ ಕುಟುಂಬಸ್ಥರಿಗೆ ಈ ದುಃಖ ಸಹಿಸುವ ಶಕ್ತಿಯನ್ನು ದೇವರು ನೀಡಲಿ ಎಂದು ಪ್ರಾರ್ಥಿಸುತ್ತೇನೆ ಬಸನಗೌಡ ಪಾಟೀಲ್ ಯತ್ನಾಳ್ ಎಕ್ಸ್ ಪೋಸ್ಟ್‌ನಲ್ಲಿ ಬರೆದುಕೊಂಡಿದ್ದಾರೆ.

ಸಿ.ಟಿ.ರವಿ ಕೂಡ ಪೋಸ್ಟ್ ಮೂಲಕ ಸಂತಾಪ ಸೂಚಿಸಿದ್ದಾರೆ. ಆತ್ಮೀಯ ಸ್ನೇಹಿತರು, ಯುವ ಬ್ರಿಗೇಡ್ ಸಂಸ್ಥಾಪಕ ಚಕ್ರವರ್ತಿ ಸೂಲಿಬೆಲೆಯವರ ಅಪ್ಪಾಜಿ ದೇವಿದಾಸ್ ಸುಬ್ರಾಯ ಶೇಟ್ ಅವರು ದೈವಾಧೀನರಾದ ವಿಷಯ ತಿಳಿದು ಅತ್ಯಂತ ದುಃಖವಾಯಿತು. ಗುರುಗಳಾಗಿ ಅನೇಕ ಆದರ್ಶ ವಿದ್ಯಾರ್ಥಿಗಳನ್ನು ಸೃಷ್ಟಿಸುವ ಮೂಲಕ ಸಮಾಜಕ್ಕೆ ಅವರು ನೀಡಿದ ಸೇವೆ ಸದಾ ಸ್ಮರಣೀಯ. ಇಹಕಾಯವನ್ನಗಲಿದ ಅವರಾತ್ಮಕ್ಕೆ ಭಗವಂತನು ಮೋಕ್ಷವನ್ನು ಕರುಣಿಸಲಿ. ಅವರ ಅಗಲಿಕೆಯ ದುಃಖವನ್ನು ಸ್ಮರಿಸುವ ಶಕ್ತಿಯನ್ನು ಭಗವಂತ ಅವರ ಕುಟುಂಬವರ್ಗ, ಶಿಷ್ಯವರ್ಗ ಹಾಗೂ ಆತ್ಮೀಯರಿಗೆ ನೀಡಲಿ ಎಂದು ಪ್ರಾರ್ಥಿಸುತ್ತೇನೆ ಎಂದಿದ್ದಾರೆ.

# ದಸರಾ ಪ್ರಯುಕ್ತ ಮೈಸೂರು-ಬೆಂಗಳೂರು-ಬೆಳಗಾವಿ ನಡುವೆ ವಿಶೇಷ ರೈಲುಗಳ ಸಂಚಾರ, ವೇಳಾಪಟ್ಟಿ




ಮಾರ್ಗದ ಮಧ್ಯದ ನಿಲುಗಡೆಗಳು

ಬೆಂಗಳೂರು **SMVT**-ಬೆಳಗಾವಿ-ಬೆಂಗಳೂರು **SMVT** ಹಬ್ಬದ ವಿಶೇಷ ರೈಲು ಮಾರ್ಗ ಮಧ್ಯದಲ್ಲಿ ಚಿಕ್ಕಬಾಣವಾರ, ತುಮಕೂರು, ಅರಸೀಕೆರೆ, ಬೀರೂರು, ದಾವಣಗೆರೆ, ಹರಿಹರ, **SMM** ಹಾವೇರಿ, **SSS** ಹುಬ್ಬಳ್ಳಿ, ಧಾರವಾಡ, ಅಳ್ನಾವರ, ಲೋಂಡಾ ಮತ್ತು ಖಾನಾಪುರ ನಿಲ್ದಾಣಗಳಲ್ಲಿ ಎರಡೂ ದಿಕ್ಕುಗಳಲ್ಲಿ ನಿಲ್ಲುತ್ತದೆ.

ಈ ವಿಶೇಷ ರೈಲು **1** ಎಸಿ **2**-ಟೈರ್, **3** ಎಸಿ **3**-ಟೈರ್, **10** ಸ್ಲೀಪರ್ ಕ್ಲಾಸ್ ಗಳೊಂದಿಗೆ ಚಲಿಸುತ್ತದೆ. **3** ಜನರಲ್ ಸೆಕೆಂಡ್ ಕ್ಲಾಸ್ ಮತ್ತು **2** ಎಸ್‌ಎಲ್‌ಆರ್/ಡಿ ಕೋಚ್‌ಗಳು ಒಳಗೊಂಡಂತೆ ಒಟ್ಟು **19** ಬೋಗಿಗಳನ್ನು ಹೊಂದಿರುತ್ತದೆ ಎಂದು ನೈಋತ್ಯ ರೈಲ್ವೆ ಅಧಿಕಾರಿಗಳು ತಿಳಿಸಿದ್ದಾರೆ.

ಎರಡನೇ ವಿಶೇಷ ಎಕ್ಸ್‌ಪ್ರೆಸ್ ವಿಶೇಷ ಕಾರ್ಯಾಚರಣೆ

ದಸರಾ ಪ್ರಯುಕ್ತ ಬೆಂಗಳೂರು **SMVT**-ಬೆಳಗಾವಿ-ಮೈಸೂರು ಎಕ್ಸ್‌ಪ್ರೆಸ್ ವಿಶೇಷ ರೈಲು **(06271)** ಕಾರ್ಯಾಚರಣೆ ನಡೆಸಲಿದೆ. ಒಂದು ಟ್ರಿಪ್ ಸೇವೆ ನೀಡುವ ಈ ರೈಲು ಸೆಪ್ಟಂಬರ್ **30** ರಂದು ಸಂಜೆ **7** ಗಂಟೆಗೆ **SMVT** ಬೆಂಗಳೂರು ನಿಲ್ದಾಣದಿಂದ ಹೊರಡುತ್ತದೆ. ಮರುದಿನ ಬೆಳಗ್ಗೆ **07:30** ಕ್ಕೆ ಬೆಳಗಾವಿ ತಲುಪುತ್ತದೆ.

ಮರಳಿ ಅದೇ ದಿಕ್ಕಿನಲ್ಲಿ ರೈಲು **(06272)** ಬೆಳಗ್ಗೆ **5:30** ಕ್ಕೆ ಬೆಳಗಾವಿಯಿಂದ ಹೊರಡುತ್ತದೆ. ಅಕ್ಟೋಬರ್ **01**ರಂದು ಹಾಗೂ ಮರುದಿನ ಬೆಳಗ್ಗೆ **07:45** ಕ್ಕೆ ಮೈಸೂರು ತಲುಪುತ್ತದೆ. ಮಾರ್ಗ ಮಧ್ಯೆ ಖಾನಾಪುರ, ಲೋಂಡಾ, ಅಳ್ನಾವರ, ಧಾರವಾಡ. ಎಸ್ ಎಸ್ ಎಸ್ ಹುಬ್ಬಳ್ಳಿ, ಎಸ್ ಎಂಎಂ ಹಾವೇರಿ, ಹರಿಹರ. ದಾವಣಗೆರೆ. ಬೀರೂರು, ಅರಸೀಕೆರೆ, ತುಮಕೂರು, ಚಿಕ್ಕಬಾಣಾವರ, ಯಶವಂತಪುರ, ಕೆಎಸ್‌ಆರ್ ಬೆಂಗಳೂರು ಮತ್ತು ಮಂಡ್ಯ ನಿಲ್ದಾಣಗಳಲ್ಲಿ ನಿಲುಗಡೆ ನೀಡಲಿದೆ ಎಂದು **SWR** ತಿಳಿಸಿದೆ.

ಮೈಸೂರು-ಬೆಳಗಾವಿ-ಬೆಂಗಳೂರು ರೈಲು

ಮೈಸೂರು-ಬೆಳಗಾವಿ-ಎಸ್‌ಎಂವಿಟಿ ಬೆಂಗಳೂರು ಎಕ್ಸ್‌ಪ್ರೆಸ್ ವಿಶೇಷ ರೈಲು (ಸಂಖ್ಯೆ **06273)** ಮೈಸೂರಿನಿಂದ ಅಕ್ಟೋಬರ್ **02** ರಂದು ರಾತ್ರಿ **11:45** ಕ್ಕೆ ಹೊರಡುತ್ತದೆ. ಅಕ್ಟೋಬರ್ **03** ರಂದು ಮಧ್ಯಾಹ್ನ **12:30** ಕ್ಕೆ ಬೆಳಗಾವಿಯನ್ನು ತಲುಪುತ್ತದೆ.ಮರಳಿ ಇದೇ ರೈಲು **(06274)** ಅಕ್ಟೋಬರ್ **03**ರಂದು ಬೆಳಗಾವಿಯಿಂದ ಸಂಜೆ **5:30** ಕ್ಕೆ ಹೊರಟು ಮರುದಿನ ಅಕ್ಟೋಬರ್ **01**ರಂದು ಬೆಳಗ್ಗೆ **05**ಕ್ಕೆ ಬೆಂಗಳೂರಿಗೆ ಬಂದು ತನ್ನ ಸೇವೆ ಕೊನೆಗೊಳಿಸುತ್ತದೆ. ಎರಡು ಬದಿ ಸಂಚಾರ ವೇಳೆ ಮಾರ್ಗಮಧ್ಯೆ ಮಂಡ್ಯ, ಕೆಎಸ್‌ಆರ್ ಬೆಂಗಳೂರು, ಯಶವಂತಪುರದಲ್ಲಿ ನಿಲ್ಲುತ್ತದೆ. ಚಿಕ್ಕಬಾಣಾವರ, ತುಮಕೂರು, ಅರಸೀಕೆರೆ, ಬೀರೂರು, ದಾವಣಗೆರೆ, ಹರಿಹರ, ಎಸ್‌ಎಂಎಂ ಹಾವೇರಿ, ಎಸ್‌ಎಸ್‌ಎಸ್ ಹುಬ್ಬಳ್ಳಿ, ಧಾರವಾಡ, ಅಳ್ನಾವರ, ಲೋಂಡಾ ಮತ್ತು ಖಾನಾಪುರ ನಿಲ್ದಾಣಗಳಲ್ಲಿ ನಿಲುಗಡೆ ನೀಡುತ್ತದೆ.

## ಬೆಂಗಳೂರಿಗೆ ಅಗತ್ಯವಾದ 4ನೇ ರೈಲ್ವೆ ಟರ್ಮಿನಲ್ ಸ್ಥಳ ಬದಲಾವಣೆ? ಕಾರಣವೇನು?




ಬೆಂಗಳೂರಲ್ಲಿ ಹೆಚ್ಚಾಗುತ್ತಿರುವ ಪ್ರಯಾಣಿಕರ ದಟ್ಟಣೆ ಕಡಿಮೆ ಮಾಡುವ ಉದ್ದೇಶದಿಂದ ಬೆಂಗಳೂರು ಗ್ರಾಮಾಂತರ ಜಿಲ್ಲೆ ವ್ಯಾಪ್ತಿಯಲ್ಲಿ ಹೊಸ ಆಧುನಿಕ ರೈಲ್ವೆ ಟರ್ಮಿನಲ್ ನಿರ್ಮಾಣ ಯೋಜನೆಗೆ ರೈಲ್ವೆ ಇಲಾಖೆ ಕೈ ಹಾಕಿದೆ. ಸ್ಥಳ ಅಂತಿಮ ಸಮೀಕ್ಷೆ ನಡೆಸಲು ಅನುಮೋದನೆ ನೀಡಿ ತಿಂಗಳುಗಳು ಕಳದಿವೆ. ಇದೀಗ ಸ್ಥಳ ಬದಲಾವಣೆ ಆಗಲಿದೆ ಎಂದು ಮೂಲಗಳು ತಿಳಿಸಿವೆ.

ಹೌದು, ಬೆಂಗಳೂರಿನ ರೈಲ್ವೆ ದಟ್ಟಣೆಗೆ ಪರಿಹಾರಾರ್ಥವಾಗಿ ನಾಲ್ಕನೇ ಕೋಚಿಂಗ್ ಟರ್ಮಿನಲ್‌ನ ಅಗತ್ಯತೆ ಇದೆ. ಆದರೆ ಯಾವ ಸ್ಥಳದಲ್ಲಿ ನಿರ್ಮಿಸಬೇಕು ಎಂಬುದು ಇನ್ನು ಸ್ಪಷ್ಟವಾಗಿಲ್ಲ. ಈ ಮೊದಲು ಉದ್ದೇಶಿಸಿದ್ದ ದೇವನಹಳ್ಳಿ ವ್ಯಾಪ್ತಿಯ ವಿಶಾಲ ಸ್ಥಳದಲ್ಲಿ ನಿರ್ಮಿಸುವುದು ಕಾರ್ಯ ಸಾಧುವಲ್ಲ. ಹೀಗಾಗಿ ನೈರುತ್ಯ ರೈಲ್ವೆ **(SWR)** ಯಲಹಂಕದ ರೈಲ್ ವೀಲ್ ಫ್ಯಾಕ್ಟರಿ **(RWF)** ಬೇರೆ ಸ್ಥಳ ಹುಡುಕಾಟದಲ್ಲಿದೆ ಎಂದು 'ದಿ ಹಿಂದೂ' ವರದಿ ಮಾಡಿದೆ.ಬೆಂಗಳೂರಿನ ನಾಲ್ಕನೇ ರೈಲ್ವೆ ಟರ್ಮಿನಲ್ ಅನ್ನು ದೇವನಹಳ್ಳಿ ಬದಲಾಗಿ ಯಲಹಂಕ ಉದ್ದೇಶಿತ ಜಾಗದಲ್ಲಿ ನಿರ್ಮಿಸುವ ನಿರೀಕ್ಷೆಗಳು ದಟ್ಟವಾಗಿದೆ. ಹೀಗೆ ಜಾಗ ಬದಲಿಸಲು ಹಲವು ಕಾರಣಗಳನ್ನು ನೀಡಲಾಗಿದೆ. ಯಲಹಂಕದಲ್ಲಿ ನಿರ್ಮಾಣಗೊಂಡರೆ ದೊಡ್ಡಬಳ್ಳಾಪುರ ಮತ್ತು ದೇವನಹಳ್ಳಿಗೆ ಹೋಗುವ ರೈಲುಗಳ ನಿಯಂತ್ರಣಕ್ಕೆ ಸಹಾಯವಾಗುತ್ತದೆ. ಅದೇ ದೇವನಹಳ್ಳಿಯಲ್ಲಿ ಸ್ಥಾಪನೆಯಾದರೆ ತಾಂತ್ರಿಕ ಮತ್ತು ಲಾಜಿಸ್ಟಿಕ್ ರಸ್ತೆ ಅಡೆತಡೆ ಉಂಟಾಗಬಹುದೆಂದು ಅಂದಾಜಿಸಲಾಗಿದೆ. ಹೀಗಾಗಿ ಸ್ಥಳ ಬದಲಾಗಿದೆ ಎಂದು ಹೇಳಲಾಗುತ್ತಿದೆ.ಸದ್ಯ ರಾಜಧಾನಿ ಬೆಂಗಳೂರಿನಲ್ಲಿ ಬೆಂಗಳೂರು ಮೂರು ಪ್ರಮುಖ ಟರ್ಮಿನಲ್‌ಗಳನ್ನು ಅವಲಂಬಿಸಿದೆ - ಕೆಎಸ್‌ಆರ್ ಸಿಟಿ, ಯಶವಂತಪುರ ಮತ್ತು ಬೈಯಪ್ಪನಹಳ್ಳಿಯಲ್ಲಿರುವ ಸರ್ ಎಂ ವಿಶ್ವೇಶ್ವರಯ್ಯ ಟರ್ಮಿನಲ್ **(SMVT)** ಇವೆ. ದೇಶದ ಈಶಾನ್ಯ ಭಾಗದ ರಾಜ್ಯಗಳಿಗೆ ಬೆಂಗಳೂರು **SMVT** ನಿಲ್ದಾಣದಿಂದ ನಿತ್ಯ ಸುಮಾರು **50** ರೈಲುಗಳು ಓಡಾಡುತ್ತವೆ. ನಿತ್ಯ ಮೂರು ಟರ್ಮಿನಲ್‌ಗಳಿಗೆ ಸುಮಾರು **140- 150**ರೈಲುಗಳು ಕಾರ್ಯಾಚರಣೆ ಮಾಡುತ್ತವೆ.

ಪ್ರಯಾಣಿಕರು ಹೆಚ್ಚಾಗುತ್ತಿದ್ದು, ರೈಲುಗಳ ಸಂಖ್ಯೆ ಹೆಚ್ಚಿಸಿದರೂ ಸಂಚಾರಕ್ಕೆ ತೊಡಕಾಗುವ ಸಾಧ್ಯತೆ ಇದೆ. ಹೀಗಾಗಿ ಹೊಸ ಟರ್ಮಿನಲ್ ಸ್ಥಾಪನೆ ಬೆಂಗಳೂರಿಗೆ ಅನಿವಾರ್ಯವಾಗಿದೆ. ಆದರೆ ಅದಕ್ಕೆ ಭೂಸ್ವಾಧೀನ ಪ್ರಕ್ರಿಯೆ ವಿಳಂಬವಾಗುವ ಲಕ್ಷಣ ಕಾಣುತ್ತಿದೆ. ಜೊತೆಗೆ ಭೂಮಿ ಖರೀದಿಸುವ ಹೊತ್ತಿಗೆ ಭೂಮಿ ಬೆಲೆ ಮತ್ತಷ್ಟು ಏಚ್ಚಾಗುವ ಸಾಧ್ಯತೆ ಇದೆ.

## ಬೆಂಗಳೂರಲ್ಲಿ Sunday Ride ಎಂದು ವಿಡಿಯೋ ಹಂಚಿಕೊಂಡ ಡಿ.ಕೆ ಶಿವಕುಮಾರ್, ಜನರ ಮಸ್ತ್ ರಿಯಾಕ್ಷನ್!

ಬೆಂಗಳೂರಿನ ರಸ್ತೆಗುಂಡಿಗಳ ಸಮಸ್ಯೆಯ ಬಗ್ಗೆ ಬೆಂಗಳೂರಿಗರು ತೀವ್ರ ಆಕ್ಷೇಪ ಹಾಗೂ ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ. ಬೆಂಗಳೂರಿನಲ್ಲಿ ಮಳೆಬಂದಾಗ ರಸ್ತೆ ಗುಂಡಿಗಳು ನಿರ್ಮಾಣವಾಗುವುದು ಸಹಜ ಎನ್ನುವಂತೆ ಆಗಿದೆ. ಆದರೆ ಈ ಬಾರಿ ಬೆಂಗಳೂರಿನ ತುಂಬಾ ರಸ್ತೆ ಗುಂಡಿಗಳು ನಿರ್ಮಾಣವಾಗಿದ್ದು. ಸಮಸ್ಯೆ ಹೆಚ್ಚಳವಾಗಿದೆ. ಇದೀಗ ಬೆಂಗಳೂರು ನಗರಾಭಿವೃದ್ಧಿ ಸಚಿವ ಹಾಗೂ ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಅವರು ಬುಲೆಟ್ ಬೈಕ್‌ನಲ್ಲಿ ನಗರ ಸುತ್ತಾಟ ಮಾಡಿದ್ದಾರೆ. ಈ ವಿಡಿಯೋವನ್ನು ಅವರು ಸೋಷಿಯಲ್ ಮೀಡಿಯಾ ಎಕ್ಸ್‌ನಲ್ಲಿ ಶೇರ್ ಮಾಡಿಕೊಂಡಿದ್ದು. ತಮ್ಮ ಅಭಿಪ್ರಾಯವನ್ನು ಹಂಚಿಕೊಂಡಿದ್ದಾರೆ.

ಬೆಂಗಳೂರಿನಲ್ಲಿ ರಸ್ತೆ ಗುಂಡಿ ಸಮಸ್ಯೆ ಹೆಚ್ಚಳವಾಗುತ್ತಿದೆ. ಇದರ ನಡುವೆ ಗ್ರೇಟರ್ ಬೆಂಗಳೂರು ಪ್ರಾಧಿಕಾರದುದು ಪಾಲಿಕೆಯ ಆಯುಕ್ತರು ಆಯಾ ಪಾಲಿಕೆಯ ವ್ಯಾಪ್ತಿಯಲ್ಲಿ ರಸ್ತೆಗುಂಡಿ ಹಾಗೂ ಕಸದ ಸಮಸ್ಯೆ ಸೇರಿದಂತೆ ಕೆಲವೊಂದು ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುತ್ತಿದ್ದಾರೆ. ಇದೀಗ ಬೆಂಗಳೂರಿನ ನಗರಾಭಿವೃದ್ಧಿ ಸಚಿವ ಮತ್ತು ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಉಪಾಧ್ಯಕ್ಷ ಡಿ.ಕೆ ಶಿವಕುಮಾರ್ ಅವರು ಭಾನುವಾರ ಬೆಂಗಳೂರು ಸುತ್ತಾಡಿದ್ದಾರೆ. ಅದರ ಅನುಭವವನ್ನು ಅವರು ಸೋಷಿಯಲ್ ಮೀಡಿಯಾ ಎಕ್ಸ್‌ನಲ್ಲಿ ಹಂಚಿಕೊಂಡಿದ್ದಾರೆ.ಡಿ.ಕೆ ಶಿವಕುಮಾರ್ ಅವರು ತಮ್ಮ ನಿವಾಸದಿಂದ ಕೆಪಿಸಿಸಿ ಕಚೇರಿಯವರೆಗೂ ತಾವೆ ಬೈಕ್ ಓಡಿಸಿಕೊಂಡು ಹೋಗಿದ್ದು, ಈ ವಿಡಿಯೋ ಇದೀಗ ಸೋಷಿಯಲ್ ಮೀಡಿಯಾದಲ್ಲಿ ವೈರಲ್ ಆಗುತ್ತಿದೆ. ಈ ಬಗ್ಗೆ ಸೋಷಿಯಲ್ ಮೀಡಿಯಾ ಎಕ್ಸ್‌ನಲ್ಲಿ ಹಂಚಿಕೊಂಡಿರುವ ಡಿ.ಕೆ ಶಿವಕುಮಾರ್ ಅವರು, ಭಾನುವಾರದ ಸವಾರಿ!

ಇಂದು ಬಿಡುವಿಲ್ಲದ ವೇಳಾಪಟ್ಟಿಯ ನಡುವೆ, ನನ್ನ ಯೌವನದ ದಿನಗಳನ್ನು ಮತ್ತೆ ಅನುಭವಿಸಲು ನಾನು ಸ್ವಲ್ಪ ಸಮಯ ತೆಗೆದುಕೊಂಡೆಯುವ ಕಾಂಗ್ರೆಸ್ ರಾಜ್ಯ ಕಾರ್ಯಕಾರಿ ಸಭೆಯಲ್ಲಿ ಭಾಗವಹಿಸಲು ಬೆಂಗಳೂರಿನ ಬೀದಿಗಳಲ್ಲಿ ಬೈಸಿಕಲ್ ಸವಾರಿ ಮಾಡಿದೆ.




ಇದು ಕೇವಲ ಸವಾರಿಗಿಂತ ಹೆಚ್ಚಿನದಾಗಿತ್ತು; ನಗರದೊಂದಿಗೆ ಮತ್ತೆ ಸಂಪರ್ಕ ಸಾಧಿಸಲು ಮತ್ತು ನಮ್ಮ ಜನ ಎದುರಿಸುತ್ತಿರುವ ಗುಂಡಿಗಳಂತಹ ದೈನಂದಿನ ಸವಾಲುಗಳನ್ನು ನೇರವಾಗಿ ವೀಕ್ಷಿಸಲು ಇದು ಒಂದು ಅವಕಾಶವಾಗಿತ್ತು. ನಾವು ಒಟ್ಟಿಗೆ ಇದ್ದೇವೆ, ಕೇಳುತ್ತಿದ್ದೇವೆ, ನೋಡುತ್ತಿದ್ದೇವೆ ಮತ್ತು ಉತ್ತಮ ಬೆಂಗಳೂರನ್ನು ನಿರ್ಮಿಸಲು ಬದ್ಧರಾಗಿದ್ದೇವೆ ಎಂದು ಡಿ.ಕೆ ಶಿವಕುಮಾರ್ ಅವರು ಸೋಷಿಯಲ್ ಮೀಡಿಯಾದಲ್ಲಿ ಬರೆದುಕೊಂಡಿದ್ದಾರೆ.

ನಮ್ಮ ಏರಿಯಾ ಕಡೆ ಬನ್ನಿ: ಇನ್ನು ಬೆಂಗಳೂರಿನ ಜನ ಈ ಟ್ವೀಟ್‌ಗೆ ಭಿನ್ನವಾಗಿ ರಿಯಾಕ್ಟ್ ಮಾಡಿದ್ದಾರೆ. ಸರ್ ಪೀಣ್ಯದ ಕಡೆ ಒಮ್ಮೆ ಬನ್ನಿ ಎಂದೂ, ವರ್ತೂರು ಕಡೆ ಬನ್ನಿ... ವೈಟ್‌ಫೀಲ್ಡ್‌ನ ರಸ್ತೆಗಳು ಅಧ್ವಾನವಾಗಿವೆ ಎಂದು ಹಲವರು ಕಮೆಂಟ್ ಮಾಡಿದ್ದಾರೆ. ನೀವು ಓಡಾಡುವ ರಸ್ತೆಗಳಲ್ಲಿ ರಸ್ತೆ ಗುಂಡಿ ಇರುವುದಿಲ್ಲ ಅಲ್ಲದೇ ಟ್ರಾಫಿಕ್ ಜಾಮ್ ಸಮಸ್ಯೆಯೂ ಇರುವುದಿಲ್ಲ. ಆದರೆ ನಮ್ಮ ಕಷ್ಟ ಯಾರಿಗೆ ಹೇಳಿಕೊಳ್ಳಬೇಕು ಎಂದು ಜನ ರಿಯಾಕ್ಟ್ ಮಾಡಿದ್ದಾರೆ.

## ಪ್ರತಾಪ್ ಸಿಂಹನ್ನ ಬಿಜೆಪಿ ಕಿತ್ತು ಬಿಸಾಕಿದೆ, ಪಾಪ ಆತನೂ ರಾಜಕೀಯ ಮಾಡಬೇಕಲ್ಲ?

ಅಕ್ಷರ್ ವಿಜೇತ ,ಬೆಂಗಳೂರು :

ರಾಜ್ಯ ಸರ್ಕಾರ ದಸರಾ ಉದ್ಘಾಟನೆಗೆ ಬಾನು ಮುಷ್ತಾಕ್ ಅವರನ್ನು ಆಹ್ವಾನಿಸಿರುವುದನ್ನು ಪ್ರಶ್ನಿಸಿ ಮಾಜಿ ಸಂಸದ ಪ್ರತಾಪ್ ಸಿಂಹ ಅವರು ಹೈಕೋರ್ಟ್ ಮೆಟ್ಟಿಲೇರಿದ್ದಾರೆ. ಈ ಬಗ್ಗೆ ಪ್ರತಿಕ್ರಿಯಿಸಿರುವ ಡಿಸಿಎಂ ಡಿಕೆ ಶಿವಕುಮಾರ್, ಈ ಬಗ್ಗೆ ಸಿಎಂ ಈಗಾಗಲೇ ಉತ್ತರ ನೀಡಿದ್ದಾರೆ. ಪ್ರತಾಪ್ ಸಿಂಹ ಅವರನ್ನು ಬಿಜೆಪಿ ಈಗಾಗಲೇ ಕಡೆಗಣಿಸಿದೆ. ಪಾಪ ಆತನಿಗೂ ರಾಜಕೀಯ ಮಾಡಬೇಕು. ಹೀಗಾಗಿ ತನ್ನ ಅಸ್ತಿತ್ವ ತೋರಿಸಿಕೊಳ್ಳಲು ಹೀಗೆಲ್ಲ ಮಾಡುತ್ತಿದ್ದಾರೆ. ಈ ಬಗ್ಗೆ ಕೋರ್ಟ್ ವಿಚಾರಣೆ ಮಾಡಿ ತೀರ್ಮಾನ ಮಾಡಲಿದೆ ಎಂದು ತಿರುಗೇಟು ನೀಡಿದ್ದಾರೆ.ನಾಡ ಹಬ್ಬ ವಿಚಾರದಲ್ಲಿ ರಾಜಕೀಯ ಮಾಡುತ್ತಿರುವ ಬಗ್ಗೆ ಮಾತನಾಡಿ, ಇದರ ಹೊರತಾಗಿ ರಾಜಕೀಯ ಮಾಡಲು ಅವರಿಗೆ ಬೇರೆ ವಿಚಾರ ಇಲ್ಲ. ಅವರಿಗೆ ರಾಜ್ಯದ ಬಗ್ಗೆ ಕಾಳಜಿ ಇದ್ದರೆ ದೆಹಲಿಗೆ ಹೋಗಿ ಕೇಂದ್ರ ಸರ್ಕಾರದ ಮೇಲೆ ಒತ್ತಡ ತಂದು ಬೆಂಗಳೂರು ಅಭಿವೃದ್ಧಿಗೆ ಅನುದಾನ, ಮೇಕೆದಾಟು, ಮಹದಾಯಿ, ಕೃಷ್ಣಾ ಮೇಲ್ದಂಡೆ ಯೋಜನೆಗಳಿಗೆ ಅನುಮತಿ, ನರೇಗಾ ಅನುದಾನ ಕೊಡಿಸಲಿ ಎಂದು ಸವಾಲ್ ಹಾಕಿದ್ದಾರೆ. ಅದನ್ನು ಬಿಟ್ಟು ಈ ರೀತಿ ಖಾಲಿ ಮಾತು ಆಡೋದು ಬೇಡ. ಕೇವಲ ಪ್ರಚಾರಕ್ಕೆ ಅವರೆಲ್ಲ ಹೀಗೆ ರಾಜಕೀಯ ಮಾಡುತ್ತಾರೆ ಎಂದು ವಾಗ್ದಾಳಿ ನಡೆಸಿದ್ದಾರೆ.



### ಬಿಜೆಪಿ ಎರಡು ಗುಂಪುಗಳ ನಡುವೆ ಕಿತ್ತಾಟ

"ಧರ್ಮಸ್ಥಳ ವಿಚಾರದಲ್ಲಿ ಸತ್ಯಾಂಶ ಒದಗಿಸಿದ್ದು ನಾವು. ಆದರೆ ಅವರು ನಮಗಿಂತ ಮುಂಚಿತವಾಗಿ ಹೈಸ್ಪೀಡ್‌ನಲ್ಲಿ ಹೊರಟಿದ್ದಾರೆ. ಬಿಜೆಪಿಯ ಎರಡು ಗುಂಪುಗಳ ನಡುವಣ ತಿಕ್ಕಾಟಕ್ಕೆ ಧರ್ಮಸ್ಥಳವನ್ನು ದುರುಪಯೋಗ ಮಾಡಿಕೊಳ್ಳುತ್ತಿದ್ದಾರೆ. ಬಲಿಪಶು ಮಾಡುತ್ತಿದ್ದಾರೆ. ಧರ್ಮಸ್ಥಳ ವಿಚಾರದಲ್ಲಿ ಷಡ್ಯಂತ್ರ ಮಾಡುತ್ತಿರುವವರು ಬಿಜೆಪಿಯವರು. ಬುರುಡೆ ಗಿರಾಕಿ ಯಾರು? ಬಿಜೆಪಿ ಕಾರ್ಯಕರ್ತರಲ್ಲವೇ? ಧರ್ಮಸ್ಥಳಕ್ಕೆ ಅಪಮಾನ ಆಗಿದ್ದರೆ ಅದು ಬಿಜೆಪಿ ನಾಯಕರು ಹಾಗೂ ಅದರ ಸಂಘಟನೆಯವರಿಂದ ಮಾತ್ರ ಎಂದು ಆರೋಪಿಸಿದ್ದಾರೆ.ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಮತಪತ್ರ ಬಳಸುವ ಬಗ್ಗೆ ಬಿಜೆಪಿ ಟೀಕೆಗೆ ಉತರ ನೀಡಿರುವ ಡಿಕೆ ಶಿವಕುಮಾರ್, ಒಂದೆರಡು ದಿನಗಳಲ್ಲಿ ಬಿಜೆಪಿಯವರು ಮಾಡಿರುವ ಕಾನೂನನ್ನು ನಿಮ್ಮ ಮುಂದೆ ತಂದಿಡುತೇನೆ. ಅವರು ಮಾಡಿರುವ ಕಾನೂನಿನಲ್ಲಿ ಈ ಚುನಾವಣೆ ವೇಳೆ ಮತಯಂತ್ರ ಅಥವಾ ಮತಪತ್ರ ಬಳಕೆ ಮಾಡಬಹುದು ಎಂದು ಹೇಳಿದ್ದಾರೆ. ಅವರೇ ಮಾಡಿರುವ ಕಾನೂನು ಪ್ರಕಾರ ನಡೆದರೆ ತಪ್ಪೇನಿದೆ? ಎಂದು ಪ್ರಶ್ನಿಸಿದ್ದಾರೆ.

### ತಮ್ಮ ಬೈಕ್‌ನಲ್ಲೇ ಬೆಂಗಳೂರು ರೌಂಡ್ಸ್

ಡಿಕೆ ಶಿವಕುಮಾರ್ ಅವರು ತಮ್ಮ ನೆಚ್ಚಿನ ಹಳೆಯ ಬೈಕ್ ಏರಿ ಸಂಡೇ ರೌಂಡ್ಸ್ ಹೊಡೆದಿದ್ದಾರೆ. ಇಂದು ತುಂಬಿದ ವೇಳಾಪಟ್ಟಿಯ ನಡುವೆ, ನನ್ನ ಯೌವನವನ್ನು ಮತ್ತೆ ಅನುಭವಿಸಲು ನಾನು ಸ್ವಲ್ಪ ಸಮಯ ತೆಗೆದುಕೊಂಡೆ. ಯುವ ಕಾಂಗ್ರೆಸ್ ರಾಜ್ಯ ಕಾರ್ಯಕಾರಿ ಸಭೆಯಲ್ಲಿ ಭಾಗವಹಿಸಲು ಬೆಂಗಳೂರಿನ ಬೀದಿಗಳಲ್ಲಿ ಬೈಕ್ ಸವಾರಿ ಮಾಡಿದೆ. ಇದು ಕೇವಲ ಸವಾರಿಗಿಂತ ಹೆಚ್ಚಿನದಾಗಿತ್ತು. ನಗರದೊಂದಿಗೆ ಮತ್ತೆ ಸಂಪರ್ಕ ಸಾಧಿಸಲು ಮತ್ತು ನಮ್ಮ ನಾಗರಿಕರು ಎದುರಿಸುತ್ತಿರುವ ಗುಂಡಿಗಳಂತಹ ದೈನಂದಿನ ಸವಾಲುಗಳನ್ನು ನೇರವಾಗಿ ವೀಕ್ಷಿಸಲು ಇದು ಒಂದು ಅವಕಾಶವಾಗಿತ್ತು. ನಾವು ಒಟ್ಟಿಗೆ ಇದ್ದೇವೆ, ಕೇಳುತ್ತಿದ್ದೇವೆ, ನೋಡುತ್ತಿದ್ದೇವೆ ಮತ್ತು ಉತ್ತಮ ಬೆಂಗಳೂರನ್ನು ನಿರ್ಮಿಸಲು ಬದ್ಧರಾಗಿದ್ದೇವೆ ಎಂದು ಡಿಕೆ ಶಿವಕುಮಾರ್ ಹೇಳಿದ್ದಾರೆ.

# ಒತ್ತುವರಿ ತೆರವು ಸಹಿತ ಕಾರ್ಯಾಚರಣೆಗೆ ಇಳಿದ ಗ್ರೇಟರ್ ಬೆಂಗಳೂರು ಪ್ರಾಧಿಕಾರ




ಅಕ್ಷರ್ ವಿಜೇತ ,ಬೆಂಗಳೂರು : |

ಬೆಂಗಳೂರು ಪೂರ್ವ ನಗರ ಪಾಲಿಕೆ ವ್ಯಾಪ್ತಿಯಲ್ಲಿ ಪಾದಚಾರಿ ಮಾರ್ಗದಲ್ಲಿ ಅನಧಿಕೃತವಾಗಿ ಅಳವಡಿಸಿರುವ ಶಾಶ್ವತ ಪೆಟ್ಟಿಗೆಗಳನ್ನು ಮುಲಾಜಿಲ್ಲದೆ ತೆರವುಗೊಳಿಸಲು ಆಯುಕ್ತ ರಮೇಶ್ ಡಿ.ಎಸ್ ರವರು ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ನಗರದ ಪಾಲಿಕೆ ವ್ಯಾಪ್ತಿಯ ಪ್ರದೇಶಗಳು, ಪಾದಾಚಾರಿ ಮಾರ್ಗಗಳ ಒತ್ತುವರಿ ವಿರುದ್ಧ ಪಾಲಿಕೆ ಅಧಿಕಾರಿಗಳು ಸಮರ ಸಾರಿದ್ದಾರೆ.ಭಾನುವಾರ ಬೆಳಗ್ಗೆ ಬೆಳ್ಳಂದೂರು ವಾರ್ಡ್ ವ್ಯಾಪ್ತಿಯ ವಿವಿಧ ಸ್ಥಳಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ ಆಯುಕ್ತ ರಮೇಶ್ ಡಿ.ಎಸ್. ಅವರು ವಿಪ್ರೋ ಬಳಿಯ ಪಾದಚಾರಿ ಮಾರ್ಗದಲ್ಲಿ ಶಾಶ್ವತವಾಗಿ ಅಳವಡಿಸಿಕೊಂಡಿರುವ ಪೆಟ್ಟಿಗೆಗಳನ್ನು ಗಮನಿಸಿದರು. ಸ್ಥಳದಲ್ಲಿಯೇ ಜೆಸಿಬಿ ಮೂಲಕ ತೆರವುಗೊಳಿಸಲಾಯಿತು. ಮತ್ತೆ ಈ ರೀತಿ ಪಾದಚಾರಿ ಮಾರ್ಗ ಒತ್ತುವರಿ ಮಾಡಿಕೊಂಡರೆ ಕಾನೂನು ಕ್ರಮ ಜರುಗಿಸುವುದುದಾಗಿ ಅವರು ಎಚ್ಚರಿಸಿದರು.ಆಟೋ ಟಿಪ್ಪರ್ ಮಸ್ಟರಿಂಗ್ ಕೇಂದ್ರಕ್ಕೆ ತೆರಳಿ ಪರಿಶೀಲನೆ ನಡೆಸಿದರು. ಅನಂತರ ಅಪಾರ್ಟ್ ಮೆಂಟ್ ಗಳಿಂದ ಸಂಗ್ರಹಿಸುವ ಬಲ್ಕ್ ವೇಸ್ಟ್ ಪ್ರಕ್ರಿಯೆ ಸಹ ವೀಕ್ಷಿಸಿದರು. ಪಾಕಶಾಲ ಹೋಟೆಲ್ ನಲ್ಲಿರುವ ಅಡುಗೆ ಕೋಣೆಗೆ ಭೇಟಿ ನೀಡಿ ಶುಚಿತ್ವ ಕಾಪಾಡಿಕೊಂಡಿರುವುದನ್ನು ಪರಿಶೀಲಿಸಿದರು. ಶುಚಿತ್ವ ಇಲ್ಲದಿರುವುದನ್ನು ಗಮನಿಸಿ ಹೋಟೆಲ್ ಮಾಲೀಕರಿಗೆ **ರೂ.25,000/-** ದಂಡ ವಿಧಿಸಿ ಮತ್ತೆ ಈ ರೀತಿ ಆಗದಂತೆ ತಿಳಿ ಹೇಳಿದರು.ಪ್ರವಾಹ ಪೀಡಿತ ಪ್ರದೇಶಗಳುಬೆಂಗಳೂರು ಪೂರ್ವ ನಗರ ಪಾಲಿಕೆಯ ಅಪರ ಆಯುಕ್ತರಾದ ಲೋಖಂಡೆ ಸ್ನೇಹಲ್ ಸುಧಾಕರ್ ರವರು ಇಂದು ಕೆ.ಆರ್ ಪುರಂ ವ್ಯಾಪ್ತಿಯಲ್ಲಿ ಬೃಹತ್ ನೀರುಗಾಲುವೆಗಳಲ್ಲಿ ಹೂಳೆತ್ತುವ, ಪ್ರವಾಹ ಪೀಡಿತ ಪ್ರದೇಶಗಳ ಪರಿಶೀಲನೆ ನಡೆಸಿ ತ್ವರಿತಗತಿಯಲ್ಲಿ ಕಾರ್ಯ ನಿರ್ವಹಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.ಪೈ ಲೇಔಟ್ ನಲ್ಲಿ ರಾಜಕಾಲುವೆ ಪರಿಶೀಲಿಸಿ, ಸ್ಥಳದಲ್ಲಾಗುವ ಪ್ರವಾಹವನ್ನು ತಪ್ಪಿಸಲು ಸಿ.ವಿ. ರಾಮನ್ ನಗರದ ಕಡೆಯಿಂದ ಬರುವ ಮಳೆ ನೀರುಗಾಲುವೆಯ ಗೋಡೆ ಎತ್ತರಿಸಬೇಕು. ಜೊತೆಗೆ ರೈಲ್ವೆ ಹಳಿ ಕೆಳಭಾಗದ ವೆಂಟ್ ಅಗಲೀಕರಣ ಮಾಡಬೇಕು ಎಂದರು.ಇನ್ನೂ ವಾರ್ಡ್ ಗಳಲ್ಲಿ ರಸ್ತೆಗಳ ಸ್ವಚ್ಛತೆ ಕಾಪಾಡುವ ಜೊತೆಗೆ ರಸ್ತೆಗುಂಡಿಗಳನ್ನು ಗುರುತಿಸಿ ತ್ವರಿತಗತಿಯಲ್ಲಿ ಮುಚ್ಚುಬೇಕು. ಹಳೇ ಮದ್ರಾಸ್ ರಸ್ತೆ ಯಲ್ಲಿ ಮಳೆ ಸಂದರ್ಭದಲ್ಲಿ ಜಲಾವೃತವಾಗುವುದನ್ನು ತಪ್ಪಿಸಲು, ಪೈಪ್ ಕಲ್ವರ್ಟ್ ಅನ್ನು ಸ್ವಚ್ಛಗೊಳಿಸಿ ನೀರು ಸರಾಗವಾಗಿ ಹರಿದು ಹೋಗುವಂತೆ ಮಾಡಬೇಕು.ರಾಮಮೂರ್ತಿ ನಗರ ಹಾಗೂ ಯರಣ್ಣ ಪಾಳ್ಯದಲ್ಲಿ ರಾಜಕಾಲುವೆ ಕಾಮಗಾರಿ ನಡೆಯುತ್ತಿದ್ದು, ತ್ವರಿತಗತಿಯಲ್ಲಿ ಪೂರ್ಣಗೊಳಿಸಬೇಕು. ಟಿನ್ ಫ್ಯಾಕ್ಟರಿ ಬಳಿ ಹಾಳಾಗಿರುವ ರಸ್ತೆ ದುರಸ್ಥಿಪಡಿಸಲು ಹಾಗೂ ಸಾರ್ವಜನಿಕ ಶೌಚಾಲಯ ನಿರ್ಮಿಸಬೇಕು. ವೆಂಗಯ್ಯನ ಕೆರೆ ಬಳಿ ಜಲಾವೃತವಾಗುತ್ತಿದ್ದು, ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದವರೊಂದಿಗೆ ಮಾತನಾಡಿ ಸಮಸ್ಯೆ ಬಗೆರಹಿಸಬೇಕು ಎಂದು ಹೇಳಿದರು.

# ಚಂದ್ರಗ್ರಹಣ ಸಮಯದಲ್ಲಿ ತಿನ್ನಬಾರದೇ, ಈ 5 ಸತ್ಯಗಳನ್ನು ತಿಳಿದುಕೊಳ್ಳಿ!



ಅಕ್ಷರ್ ವಿಜೇತ,ಬೆಂಗಳೂರು |

ಅಪರೂಪದ ಹಾಗೂ ವರ್ಷದ ಕೊನೆಯ ಚಂದ್ರಗ್ರಹಣವು ಭಾನುವಾರ (ಸೆಪ್ಟೆಂಬರ್ 07)ದಂದು ಗೋಚರಿಸಿದೆ. ಇದು ಅಪರೂಪದಲ್ಲಿ ಅಪರೂಪದ ಚಂದ್ರಗ್ರಹಣ ಎಂದೇ ಪರಿಗಣಿಸಲಾಗಿದೆ. ಆದರೆ ಚಂದ್ರಗ್ರಹಣವನ್ನು ನೋಡಬೇಕೇ ಅಥವಾ ನೋಡಬಾರದೇ ಎನ್ನುವ ವಿಚಾರದಲ್ಲಿ ಹಲವರಲ್ಲಿ ಗೊಂದಲಗಳು ಇವೆ. ಇನ್ನು ಚಂದ್ರಗ್ರಹಣವು ಸಂಪೂರ್ಣವಾಗಿ ನೈಸರ್ಗಿಕ ಪ್ರಕ್ರಿಯೆಯಾಗಿದೆ. ಇನ್ನು ಚಂದ್ರಗ್ರಹಣಕ್ಕೆ ಸಂಬಂಧಿಸಿದಂತೆ ಜನರಲ್ಲಿ ಇರುವ ಐದು ಮಿಥ್ಯೆ ಮತ್ತು ಸಂತ್ಯಾಂಶ ಎನ್ನುವುದನ್ನು ಈ ಲೇಖದಲ್ಲಿ ನೋಡೋಣ.ಚಂದ್ರನ ಬಣ್ಣವು ಕಡುಗೆಂಪು ಬಣ್ಣಕ್ಕೆ ತಿರುಗುವುದರಿಂದ ಈ ಚಂದ್ರಗ್ರಹಣವನ್ನು ರಕ್ತ ಚಂದ್ರಗ್ರಹಣ ಎಂದು ಕರೆಯಲಾಗುತ್ತದೆ. ಚಂದ್ರಗ್ರಹಣ ಹಾಗೂ ರಕ್ತ ಚಂದ್ರನ ಬಗ್ಗೆ ಬೆರಗುಗೊಳಿಸುವ ಸಂಗತಿಗಳಿವೆ. ಇದೇ ಕಾರಣಕ್ಕೆ ಇಂದಿನ ಚಂದ್ರಗ್ರಹಣ ವಿಶೇಷವಾಗಿದೆ. ಚಂದ್ರಗ್ರಹಣಕ್ಕೆ ಸಂಬಂಧಿಸಿದಂತೆ 5 ಪ್ರಮುಖ ಮಿಥ್ಯೆ ಹಾಗೂ ವಾಸ್ತವಾಂಶ ಇಲ್ಲಿವೆ. ಈ ಬಗ್ಗೆ TN ವರದಿ ಮಾಡಿದೆ.

1. ಮಿಥ್ಯೆ: ಚಂದ್ರಗ್ರಹಣವನ್ನು ನೋಡುವುದರಿಂದ ನಿಮ್ಮ ಕಣ್ಣುಗಳಿಗೆ ಹಾನಿ ಆಗುತ್ತದೆ ?

ವಾಸ್ತವ: ಚಂದ್ರಗ್ರಹಣಗಳನ್ನು ಬರಿಗಣ್ಣಿನಿಂದ ನೋಡುವುದು ಸಂಪೂರ್ಣವಾಗಿ ಸುರಕ್ಷಿತವಾಗಿದೆ. ನೀವು ಚಂದ್ರಗ್ರಹಣವನ್ನು ನೋಡುವುದಕ್ಕೆ ಕನ್ನಡಕ ಅಥವಾ ಫಿಲ್ಟರ್ ಸಾಧನಗಳನ್ನು ಬಳಸುವ ಅವಶ್ಯಕತೆ ಇಲ್ಲ. ಆದರೆ ಸೂರ್ಯಗ್ರಹಣವನ್ನು ನೋಡುವ ಸಂದರ್ಭದಲ್ಲಿ ನೀವು ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ಅನುಸರಿಸಬೇಕು. ಯಾಕೆಂದರೆ ಸೂರ್ಯಗ್ರಹಣವನ್ನು ಬರಿಗಣ್ಣಿನಲ್ಲಿ ನೋಡಲು ಸಾಧ್ಯವಿಲ್ಲ. ಅಲ್ಲದೇ ಬರಿಗಣ್ಣಿನಿಂದ ನೋಡುವುದರಿಂದ ಕಣ್ಣಿಗೆ ಹಾನಿಯಾಗುವ ಸಾಧ್ಯತೆಯೂ ಇರುತ್ತದೆ.

2. ಮಿಥ್ಯೆ: ಗ್ರಹಣದ ಸಮಯದಲ್ಲಿ ಆಹಾರವನ್ನು ಸೇವಿಸುವುದು ಅಸುರಕ್ಷಿತ ಅಥವಾ ತಪ್ಪು ?

ಸತ್ಯ: ಗ್ರಹಣದ ಸಮಯದಲ್ಲಿ ಆಹಾರವನ್ನು ಸೇವಿಸುವುದು ಅಸುರಕ್ಷಿತ ಅಥವಾ ತಿನ್ನಬಾರದು ಎನ್ನುವುದಕ್ಕೆ ಸಂಬಂಧಿಸಿದಂತೆ ಯಾವುದೇ ವೈಜ್ಞಾನಿಕ ಅಧ್ಯಯನವಿಲ್ಲ. ಚಂದ್ರಗ್ರಹಣ ಸಮಯದಲ್ಲಿ ಭೂಮಿಗೆ ಯಾವುದೇ ವಿಕಿರಣ ಬೀಳುವುದಿಲ್ಲ ಅಥವಾ ಪರಿಣಾಮ ಬೀರುವುದಿಲ್ಲ.

3. ಮಿಥ್ಯೆ: ಗರ್ಭಿಣಿಯರು ಗ್ರಹಣದ ಸಮಯದಲ್ಲಿ ಹೊರಗೆ ಹೋಗಬಾರದು. ಹೋದರೆ ಮಗುವಿಗೆ ಗಾಯದ ಗುರುತು ಬೀಳುವ ಸಾಧ್ಯತೆ ಇದೆ ?

ಸತ್ಯ: ವಿಜ್ಞಾನದ ಪ್ರಕಾರ ಈ ವಿಷಯವನ್ನು ಸಾಬೀತು ಮಾಡುವ ಯಾವುದೇ ಪುರಾವೆಗಳಿಲ್ಲ. ಮಗುವಿನ ದೈಹಿಕ ಗುರುತುಗಳು ಮತ್ತು ಲಕ್ಷಣಗಳು ಅವರ ಬೆಳವಣಿಗೆಗೆ ಮಾತ್ರ ಸಂಬಂಧಿಸಿವೆ. ಅಲ್ಲದೇ ಇದು ಡಿಎನ್ಎಯಿಂದ ನಿರ್ಧರಿಸಲ್ಪಡುತ್ತವೆ. ಇದಕ್ಕೂ ಚಂದ್ರಗ್ರಹಣಕ್ಕೂ ಯಾವುದೇ ಸಂಬಂಧವಿಲ್ಲ.

4. ಮಿಥ್ಯೆ: ಗ್ರಹಣವು ಭೂಕಂಪ ಹಾಗೂ ಪ್ರಕೃತಿ ವಿಕೋಪಗಳಿಗೆ ಕಾರಣವಾಗಬಹುದು ?

ಸತ್ಯ: ಗ್ರಹಣಗಳು ಯಾವುದೇ ರೀತಿಯ ನೈಸರ್ಗಿಕ ವಿಕೋಪಗಳಿಗೆ ಕಾರಣವಾಗುವ ಸಾಧ್ಯತೆ ಇಲ್ಲ. ಇದು ಆಕಾಶದಲ್ಲಿ ಸಂಭವಿಸುವ ಪ್ರಕ್ರಿಯೆಯಾಗಿದೆ ಮತ್ತು ಅತ್ಯಂತ ಸಹಜ ಪ್ರಕೃತಿ ಪ್ರಕ್ರಿಯೆಯಾಗಿದೆ.

5. ಮಿಥ್ಯೆ: ಗ್ರಹಣಗಳು ಸಂಭವಿಸಿದರೆ ದುರದೃಷ್ಟ ಬರುವ ಸಾಧ್ಯತೆ ಇದೆ ?

ಸತ್ಯ: ಗ್ರಹಣಗಳು ಜನರಿಗೆ ಯಾವುದೇ ದುರದೃಷ್ಟವನ್ನು ಉಂಟುಮಾಡುವುದಿಲ್ಲ. ಇದು ಕೇವಲ ಮೂಢನಂಬಿಕೆಯ ವಿಷಯವಾಗಿದೆ. ಚಂದ್ರನು ಕೆಂಪು ಬಣ್ಣಕ್ಕೆ ತಿರುಗುತ್ತಿದ್ದಂತೆ, ಜನರು ಅದನ್ನು ದುರದೃಷ್ಟ ಎಂದು ಭಾವಿಸುವ ಅವಶ್ಯಕತೆ ಇಲ್ಲ.

# ಬೆಂಗಳೂರು ಸೇರಿ ಒಳನಾಡಿನ 08 ಜಿಲ್ಲೆಗಳಿಗೆ ಭಾರೀ ಮಳೆ!

## ಕರಾವಳಿ-ಮಲೆನಾಡಿಗೆ ಗುಡ್‌ನ್ಯೂಸ್




ಕರ್ನಾಟಕದಾದ್ಯಂತ ಬಿಟ್ಟು ಬಿಡದೇ ಅಬ್ಬರಿಸಿದ್ದ ಮುಂಗಾರು ಮಳೆಯು ಒಳನಾಡಿನಲ್ಲಿ ಜೋರಾಗಿ ಸುರಿಯುವ ಎಲ್ಲ ಲಕ್ಷಣ ಇದೆ. ರಾಜಧಾನಿ ಬೆಂಗಳೂರು ಸೇರಿದಂತೆ ವಿವಿಧ ಜಿಲ್ಲೆಗಳಲ್ಲಿ ಸಾಧಾರಣದಿಂದ ಭಾರೀ ಮಳೆ ಆಗುವ ಮುನ್ಸೂಚನೆ ಇದೆ. ಇತ್ತ ಮಲೆನಾಡು ಹಾಗೂ ಕರಾವಳಿ ಭಾಗದ ಜನರಿಗೆ ಎಂದು ಭಾರತೀಯ ಹವಾಮಾನ ಇಲಾಖೆ ಗುಡ್ ನ್ಯೂಸ್ ನೀಡಿದೆ.

ಮುಂಗಾರು ಪೂರ್ವದಿಂದಲೂ ಕರ್ನಾಟಕದ ಉಡುಪಿ, ಉತ್ತರ ಕನ್ನಡ ಹಾಗೂ ದಕ್ಷಿಣ ಕನ್ನಡ ಮತ್ತು ಶಿವಮೊಗ್ಗ, ಕೊಡಗು, ಹಾಸನ, ಚಿಕ್ಕಮಗಳೂರು ವ್ಯಾಪ್ತಿಯಲ್ಲಿ ದಿನವಿಡೀ ಧಾರಾಕಾರ ಮಳೆ ಆಗುತ್ತಿತ್ತು. ಇದೀಗ ಅಂತಹ ಯಾವುದೇ ಮುನ್ಸೂಚನೆ ಇಲ್ಲ. ಬದಲಾಗಿ ಮಳೆ ಈ ಭಾಗದಲ್ಲಿ ಸಂಪೂರ್ಣವಾಗಿದೆ ತಗ್ಗಿದೆ. ಆಗಾಗ ಹಗುರದಿಂದ ಸಾಮಾನ್ಯ ಮಳೆ ಆಗಬಹುದೆಂದು ಎಚ್ಚರಿಸಿದೆ. ಸದ್ಯಕ್ಕೆ ಈ ಭಾಗದ ಜನರು ನಿಟ್ಟುಸಿರುವ ಬಿಡುವಂತಾಗಿದೆ.ಇದೇ ಅವಧಿಯಲ್ಲಿ ಮುಂದಿನ ಒಂದು ವಾರದ ಹವಾಮಾನ ಮುನ್ಸೂಚನೆಯಲ್ಲಿ ಒಳನಾಡು ಜಿಲ್ಲೆಗಳ ಹಲವೆಡೆ ಭಾರೀ ಮಳೆ ನಿರೀಕ್ಷೆ ಇದೆ. ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು ಗ್ರಾಮಾಂತರ, ಕಲಬುರಗಿ, ವಿಜಯಪುರ, ಕೋಲಾರ, ಚಿಕ್ಕಬಳ್ಳಾಪುರ, ರಾಮನಗರ ಹಾಗೂ ತುಮಕೂರು ಸೇರಿ **08** ಜಿಲ್ಲೆಗಳ ವ್ಯಾಪ್ತಿಯಲ್ಲಿ ಸೆಪ್ಟಂಬರ್ **11**ರಂದು ಸಾಧಾರಣದಿಂದ ಭಾರೀ ಮಳೆ ಸುರಿಯಲಿದೆ ಎಂದು ಐಎಂಡಿ ತಿಳಿಸಿದೆ. ಹೀಗಾಗಿ ಅಂದು ಆ ಎಲ್ಲ ಜಿಲ್ಲೆಗಳಿಗೆ 'ಯೆಲ್ಲೋ ಅಲರ್ಟ್' ಘೋಷಿಸಲಾಗಿದೆ.ಉಳಿದಂತೆ ಮುಂದಿನ ಒಂದು ವಾರ ಕರಾವಳಿಗೆ ಹಾಗೂ ಮಲೆನಾಡಿನ ಒಂದೆಡೆರು ಕಡೆಗಳಲ್ಲಿ ಹಗುರ ಇಲ್ಲವೇ ಸಾಮಾನ್ಯ ಮಳೆ ಆಗುವ ನಿರೀಕ್ಷೆ ಇದೆ. ಇದರ ಹೊರತು ರಾಜ್ಯದ ವಾತಾವರಣ, ಹವಾಮಾನದಲ್ಲಿ ಗಂಭೀರ ಸ್ವರೂಪದ ಬದಲಾವಣೆಗಳು ಇಲ್ಲ. ಒಳನಾಡಿನಲ್ಲಿ ಸದ್ಯ ಬಿಸಿಲಿನ ವಾತಾವರಣ ಕಂಡು ಬಂದಿದೆ ಎಂದು ಹವಾಮಾನ ತಜ್ಞರು ತಿಳಿಸಿದ್ದಾರೆ.ನೆನ್ನೆ ಭಾನುವಾರ ರಾಜ್ಯದ ಕೊಡಗಿನ ಗೋಣಿಕೊಪ್ಪಲು **2** ಮಿ.ಮೀ, ಮೂಡಿಗೆರೆ **12**, ಆಗುಂಬೆ **13**, ಚಂದೂರಾಯನಹಳ್ಳಿ **20**, ಹೆಸರಘಟ್ಟ **0.5**, ದಕ್ಷಿಣ ಕನ್ನಡ **1**, ಚಿಕ್ಕಬಳ್ಳಾಪುರ **2.5** ಮತ್ತು ಬೆಂಗಳೂರಿನ ಗೋಪಾಲ್ ನಗರದಲ್ಲಿ **0.5** ಮಿಲಿ ಮೀಟರ್ ಮಳೆ ದಾಖಲಾಗಿದೆ ಎಂದು ವರದಿ ತಿಳಿಸಿದೆ.

ಬೆಂಗಳೂರು ಹವಾಮಾನ ವರದಿ

ನಗರದಲ್ಲಿ ಮುಂದಿನ ಒಂದು ವಾರದ ಪೈಕಿ ಅಲ್ಲಲ್ಲಿ ಹಗರು ಮಳೆ ಆಗಲಿದೆ. ಸೆಪ್ಟಂಬರ್ **11**ರಂದು ಮಾತ್ರ ಬೆಂಗಳೂರು ನಗರಕ್ಕೆ ಭಾರೀ ಮಳೆ ಪ್ರಯುಕ್ತ 'ಯೆಲ್ಲೋ ಅಲರ್ಟ್' ನೀಡಲಾಗಿದೆ. ಗರಿಷ್ಠ **30** ಡಿಗ್ರಿ ಸೆಲ್ಸಿಯಸ್ ಹಾಗೂ ಕನಿಷ್ಠ **20** ಡಿಗ್ರಿ ಸೆಲ್ಸಿಯಸ್ ತಾಪಮಾನ ಕಂಡು ಬರಲಿದೆ.